ಮಂಗಳವಾರ, 09.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 118
Digital Varthe Kannada Daily
Volume 01 - Issue 118
Tuesday 09.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಅಂಬೇಡ್ಕರ್ ರವರ 69ನೇ ಪರಿನಿರ್ವಾಣ ದಿನ ಆಚರಣೆ



**ನೆಲಮಂಗಲ** : ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರು ಚಿಕ್ಕ ವಯಸಿನಲ್ಲೇ ಸಾಕಷ್ಟು ನೋವು ಹಿಂಸೆ ಅನುಭವಿಸಿನಮ್ಮ ಜನಕ್ಕೆ ಇಂತಹ ಸಂಕಷ್ಟ ಎದುರು ಆಗಬಾರದೆಂದು ಬಲಿಷ್ಠವಾದ ಸಂವಿಧಾನ ವನ್ನು ರಚಿಸಿದೇಶಕ್ಕೆ ಕೊಡುಗೆಯಾಗಿ ನೀಡಿದ್ದಾರೆಎಂದು ದಲಿತ ಸಂಘರ್ಷ ಸಮಿತಿ ಹಿರಿಯ ಹೋರಾಟಗಾರರದ ಹೆಚ್ ರಾಮಪ್ಪ ತಿಳಿಸಿದರು. ನಗರದ ಡಾ. ಬಿ ಆರ್ ಅಂಬೇಡ್ಕರ್ ಭವನದಲ್ಲಿ ಪರಿನಿರ್ವಾಣ ದಿನವನ್ನು ಆಚರಿಸಿ ಮಾತನಾಡಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿ ಹಿರಿಯ ಹೋರಾಟಗಾರರಾದ ಎಂ. ಸಿ. ಬೈಲ ಪ್ಪ ಮಾತನಾಡಿ ಡಾ.ಬಿ.ಆರ್. ಅಂಬೇಡ್ಕರ್ ರವರು ದಲಿತರು, ಶೋಷಿತರು, ತುಳಿತಕ್ಕೊಳಗಾದವರು, ಹಿಂದುಳಿದವರು, ಅಲ್ಪಸಂಖ್ಯಾತರು ಸೇರಿದಂತೆ ಎಲ್ಲಾ ಜಾತಿ ಧರ್ಮದವರಿಗೆ ಸಂವಿಧಾನದಲ್ಲಿ ಸಮಾನತೆಯನ್ನು ಕಲ್ಪಿಸಿದ್ದಾರೆ ಅವರ ಆಶಯದಂತೆ ಪ್ರತಿಯೊಬ್ಬರು ನಡೆದುಕೊಂಡಾಗ ಮಾತ್ರ ಸಂವಿಧಾನಕ್ಕೆ ನಿಜವಾದ ಅರ್ಥ ಸಿಗುತ್ತದೆ. ಸಂವಿಧಾನದಡಿಯಲ್ಲಿ ಸಿಗುವ ಸೌಲತ್ತುಗಳನ್ನು ಬಳಸಿಕೊಂಡು ಮೇಲ್ಪಂಕ್ತಿಹಾಕಬೇಕು ಎಂದರು.

ಈ ಸಂದರ್ಭದಲ್ಲಿ ರಾಜ್ಯ ಸಂಘಟನ ಸಂಚಾಲಕಬಸವರಾಜು ,ಸಾವಿತ್ರಮ್ಮ ,ಹಿರಿಯ ಹೋರಾಟಗಾರರ ದಗಂಗಹನುಮಯ್ಯ, ನಿಡವಂದ ಕಾಂತರಾಜು,ರವಿಕುಮಾರ್ ನೆರಲಘಟ್ಟ ರಾಮು, ಸೂ ಲುಕುಂಟೆಪೂಜಪ್ಪ, ಜಯನಗರಗಂಗಾಧರ್, ಆಗಳಕುಪ್ಪೆ ಹನುಮಂತರಾಜು, ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಉತ್ತಮ ಆಡಳಿತ :- ದಿನ್ನೂರು ವೆಂಕಟೇಶ್



**ಬೆಂಗಳೂರು**:ಗ್ರಾಮಾಂತರ ದೇವನಹಳ್ಳಿ ತಾಲೂಕು ಹಾರೋ ಹಳ್ಳಿ ಪಂಚಾಯಿ ತಿಗೆ ನಡೆದ ಚುನಾವಣೆ ಯಲ್ಲಿ ಎಸ್. ಮಂಜುಳಮ್ಮ ಅಧ್ಯಕ್ಷರಾಗಿ ಆಯ್ಕೆ , ಉಪಾಧ್ಯಕ್ಷ ಸ್ಥಾನಕ್ಕೆ ಮಂಜುಳ ಅವರು ಅವಿರೋಧವಾಗಿ ಆಯ್ಕೆಯಾದರು.

ದಿನ್ನೂರು ವೆಂಕಟೇಶ್ ಮಾತನಾಡಿ.... ಚುನಾಯಿತರನ್ನು ಸನ್ಮಾನಿಸಿದ ಬಳಿಕ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಉತ್ತಮ ಆಡಳಿತ ನೀಡುತ್ತಿದೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಹಾಗೂ ಆಹಾರ ಪೂರೈಕೆ ಸಚಿವರಾದ ಕೆಎಚ್ ಮುನಿಯಪ್ಪ ಅವರು ತಾಲೂಕಿನ ಅಭಿವೃದ್ಧಿಗಾಗಿ ನಾನಾ ಯೋಜನೆಗಳ ಮೂಲಕ ಅನುದಾನಗಳನ್ನು ತರುವ ಮೂಲಕ ಕ್ಷೇತ್ರದ ಸರ್ವತೋಮುಖ ಅಭಿವೃ ದ್ಧಿಗೆ ಶ್ರಮಿಸುತಿದ್ದಾರೆಂದರು.

ಕಾಂಗ್ರೆಸ್ ಯುವ ಮುಖಂಡ ರಘು ಅವರು ಮಾತ ನಾಡಿ, ಹಾರೋಹಳ್ಳಿ ಗ್ರಾಮ ಪಂಚಾಯಿತಿ ನೂತನ ಕಟ್ಟಡ ಅಭಿವೃದ್ಧಿಗೆ ಸಚಿವರು ಹೆಚ್ಚಿನ ಸಹಕಾರ ನೀಡಿ ದ್ದಾರೆ ಅವರ ಮಾರ್ಗದರ್ಶನದಂತೆ ಮುಂಬರುವ ತಾಲೂಕು ಪಂಚಾಯಿತಿ ಜಿಲ್ಲಾ ಪಂಚಾಯಿತಿ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಲಾಗುವುದೆಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಎಸ್ ಆರ್. ರವಿಕುಮಾರ್, ಚನ್ನಹಳ್ಳಿ ರಾಜಣ್ಣ, ಅನಂತಕುಮಾರಿ ಚಿನ್ನಪ್ಪ, ರಘು, ರಾಮಚಂದ್ರಪ್ಪ, ಅಮರ್ ನಾಥ್, ತಿಮ್ಮಹಳ್ಳಿ ಅಶ್ವತಪ್ಪ, ತಾ. ಪಂ. ಚೈತ್ರ ವೀರೇಗೌಡ, ನಟರಾಜು, ರಾಜೇಶ್, ಚಿಕ್ಕನಹಳ್ಳಿ ವೆಂಕಟೇಶ್, ಯಲಿಯೂರು ಸುನೀಲ್, ಗೊಡ್ಲು ಮುದ್ದೇನಹಳ್ಳಿ ಮುನಿರಾಜು, ಹಾರೋಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯರಾದ ಸುಮ, ಮನೋಹರ್, ಸತೀಶ್, ಶಂಕರ್, ಶ್ರೀನಿವಾಸ್, ನರಸಮ್ಮ, ಹರೀಶ್, ಬುಳ್ಳಹಳ್ಳಿ ಮಂಜುಳ, ಗ್ರಾಮ ಸ್ಥರು ಹಾಜರಿದ್ದರು.

## ರೈತರ ಬೇಡಿಕೆಗಳಿಗೆ ಬೆಂಬಲವಾಗಿ ಬಿಜೆಪಿ ರೈತ ಮೋರ್ಚಾದ ಬೃಹತ್ ಪ್ರತಿಭಟನೆ

**ನೆಲಮಂಗಲ**:ಭುಗಿಲೆದ್ದ ರೈತರ ಆಕ್ರೋಶ: ರೈತರ ಬೇಡಿಕೆಗಳಿಗಾಗಿ ಬಿಜೆಪಿ ರೈತ ಮೋರ್ಚಾದಿಂದ ಬೃಹತ್ ಪ್ರತಿಭಟನೆ ಎತ್ತಿನ ಗಾಡಿ, ಟ್ರ್ಯಾಕ್ಟರ್‌ಗಳಲ್ಲಿ ಸಾಗಿ ತಹಸೀಲ್ದಾರ್‌ಗೆ ಮನವಿ; ಕೆ.ಐ.ಎ.ಡಿ.ಬಿ. ರೈತ ವಿರೋಧಿ ನೀತಿಯ ವಿರುದ್ಧ ಹೋರಾಟದ ಎಚ್ಚರಿ



ನೆಲಮಂಗಲ, ಬೆಂಗಳೂರು ಗ್ರಾಮಾಂತರ: ರಾಜ್ಯ ಕಾಂಗ್ರೆಸ್ ಸರ್ಕಾರದ ರೈತ ವಿರೋಧಿ ನೀತಿಗಳು ಮತ್ತು ಬೆಂಬಲ ಬೆಲೆ ನೀಡುವಲ್ಲಿನ ವಿಫಲತೆಯನ್ನು ಖಂಡಿಸಿ, ಬಿಜೆಪಿ ಪಕ್ಷದ ಬೆಂಗಳೂರು ಗ್ರಾಮಾಂತರ ಜಿಲ್ಲಾ ರೈತ ಮೋರ್ಚಾ ವತಿಯಿಂದ ನೆಲಮಂಗಲದಲ್ಲಿ ಇಂದು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು. ನೆಲಮಂಗಲ ನಗರದ ಚೌಡೇಶ್ವರಿ ದೇವಾಲಯದಿಂದ ಆರಂಭವಾದ ಪ್ರತಿಭಟನಾಕಾರರು, ಎತ್ತಿನ ಗಾಡಿಗಳು ಮತ್ತು ಟ್ರ್ಯಾಕ್ಟರ್‌ಗಳನ್ನು ಬಳಸಿ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ತಾಲೂಕು ಕಚೇರಿವರೆಗೆ ಸಾಗಿದರು.

ಈ ವೇಳೆ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ತಹಸೀಲ್ದಾರ್ ಅವರಿಗೆ ತಮ್ಮ ಬೇಡಿಕೆಗಳ ಮನವಿಯನ್ನು ಸಲ್ಲಿಸಿದರ ಹಾಲು ಉತ್ಪಾದಕರಿಗೆ 620 ಕೋಟಿ ರೂ. ಪ್ರೋತ್ಸಾಹ ಧನ ಬಾಕಿ ಪ್ರತಿಭಟನೆಯಲ್ಲಿ ಭಾಗ ವಹಿಸಿ ಮಾತನಾಡಿದ ವಿಧಾನ ಪರಿಷತ್ ಮಾಜಿ ಸದಸ್ಯ ಅಶ್ವಥ್ ನಾರಾಯಣ್ ಅವರು, ರಾಜ್ಯದಲ್ಲಿ ಕಬ್ಬು, ಈರು ಳ್ಳಿ, ಸೋಯಾಬೀನ್ ಸೇರಿದಂತೆ ಹಲವು ಬೆಳೆಗಳಿಗೆ ಬೆಂಬಲ ಬೆಲೆ ನೀಡುವಲ್ಲಿ ಸರ್ಕಾರ ಸಂ ಪೂರ್ಣ ವಿಫಲವಾಗಿದೆ.

ರಾಜ್ಯಾದ್ಯಂತ ಹಾಲು ಉತ್ಪಾದಕರಿಗೆ ಬಾಕಿ ಇರುವ ೬೨೦ ಕೋಟಿ ರೂ.ಗಳ ಪ್ರೋತ್ಸಾಹ ಧನವನ್ನು ರಾಜ್ಯ ಸರ್ಕಾರ ತಕ್ಷಣವೇ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು "ಸರ್ಕಾ ರದ ನಿರ್ಲಕ್ಷ್ಯ ದಿಂದ ಈಗಾಗಲೇ ೩,೫೦೦ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರಾಗಿ ಖರೀದಿ ಕೇಂದ್ರಗಳನ್ನು ಸಹ ಆರಂಭಿಸದೇ ರೈತರನ್ನು ಕಡೆಗಣಿಸಲಾಗಿದೆ," ಎಂದು ಅಶ್ವಥ್ ನಾರಾಯಣ್ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಿದರ.

ತಾಲ್ಲೂಕಿನಲ್ಲಿ ಭ್ರಷ್ಟಾಚಾರ ತಾಂಡವ; ಕೆ.ಐ.ಎ.ಡಿ.ಬಿ. ವಿರುದ್ಧ ಉಗ್ರ ಹೋರಾಟ: ಬೆಂಗಳೂರು ಗ್ರಾಮಾಂತರ ಜಿಲ್ಲಾ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ಕೆ.ಪಿ. ಭೃಂಗೇಶ್ ಮಾತನಾಡಿ, ತಾಲ್ಲೂಕಿನಲ್ಲಿ ರೈತರಿಗೆ ಸಂಬಂಧಿಸಿದ ೨೦ಕ್ಕೂ ಅಧಿಕ ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಇಂದು ಪ್ರತಿಭಟನೆ ನಡೆಸಲಾಗಿದೆ.

ಕೆ.ಐ.ಎ.ಡಿ.ಬಿ. (KIADB) ಯ ರೈತ ವಿರೋಧಿ ಭೂಸ್ವಾಧೀನ ನೀತಿಯ ವಿರುದ್ಧ ಹೋರಾಟ ಮುಂದುವರಿ ಸುವುದಾಗಿ ಎಚ್ಚರಿಸಿದರು ಇದೇ ವೇಳೆ ಮಾತನಾಡಿದ ಬೆಂಗ ಳೂರು ಗ್ರಾಮಾಂತರ ಬಿಜೆಪಿ ಜಿಲ್ಲಾ ಧ್ಯಕ್ಷ ರಾಮಕೃಷ್ಣಪ್ಪ ಅವರು, ಕಳೆದ ಎರಡು ವರ್ಷಗಳಿಂದ ರಾಜ್ಯ ಕಾಂಗ್ರೆಸ್ ಸರ್ಕಾರ ರೈತ ವಿರೋಧಿ ನೀತಿ ಅನುಸರಿಸುತ್ತಿರುವುದು ದುರಂ ತ. ತ್ಯಾಮಗೊಂಡ್ಲು ಮತ್ತು ದಾಬಸ್ ಪೇಟೆ ಹೋಬಳಿಯ ರೈತರು ಕೆ.ಐ.ಎ.ಡಿ.ಬಿ.ಯಿಂದ ತೀವ್ರ ತೊಂದರೆ ಅನುಭವಿಸುತ್ತಿದ್ದು, ಈ ಸಮಸ್ಯೆ ಬಗೆಹರಿಸದಿದ್ದರೆ ಜಿಲ್ಲೆಯಲ್ಲಿ ಉಗ್ರ ಹೋರಾಟ ನಡೆಸುತ್ತೇವೆ ಎಂದು ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದರ

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ, ಮಾಜಿ ಎಂಎಲ್‌ಸಿ ಅಶ್ವಥ್ ನಾರಾಯಣ್, ರೈತ ಮೋರ್ಚಾದ ಕೆ.ಪಿ. ಭೃಂಗೇಶ್, ಜಿ. ಪಂ. ಮಾಜಿ ಅಧ್ಯಕ್ಷ ಮರಿಸ್ವಾಮಿ, ಮಾಜಿ ಶಾಸಕ ನಾಗರಾಜು, ಮಂಡಲ ಅಧ್ಯಕ್ಷರಾದ ಅರುಣ್ ಗೌಡ, ಸಿ.ಎಂ. ಮಂಜುನಾಥ್ ಸೇರಿದಂತೆ ಸಾವಿರಾರು ರೈತರು ಮತ್ತು ಬಿಜೆಪಿ ಕಾರ್ಯಕರ್ತರು ಭಾಗವಹಿಸಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

## ಮದುವೆಯಾಗಬೇಕಿದ್ದ ಭಾವಿ ದಂಪತಿಯ ದುರಂತ ಅಂತ್ಯ

**ಕೊಪ್ಪಳ**: ಫೋಟೋಶೂಟ್‌ಗೆ ಹೋಗಿದ್ದ ಭಾವಿ ದಂಪತಿ ಅಪಘಾತದಲ್ಲಿ ಮೃತಪಟ್ಟಿರುವ ಘಟನೆ ಜಿಲ್ಲೆಯ ಗಂಗಾವತಿ ತಾಲೂಕಿನ ಚಿಕ್ಕಬೆಣಕಲ್ ಗ್ರಾಮದ ಬಳಿ ನಡೆದಿದೆ.

ಕೊಪ್ಪಳ ತಾಲೂಕಿನ ಹನುಮನಹಟ್ಟಿ ಗ್ರಾಮದ ಕರಿಯಪ್ಪ ಮಡಿವಾಳ ಹಾಗೂ ಕಾರಟಗಿ ತಾಲೂಕಿನ ಮುಷ್ಟೂರು ಗ್ರಾಮದ ಕವಿತಾ ಮೃತರು. ಈ ಜೋಡಿಯ ಮದುವೆಯನ್ನು ಇದೇ ತಿಂಗಳ 20ರಂದು ನಿಶ್ಚಯಿಸಲಾಗಿತ್ತು. ಮದುವೆ ಹಿನ್ನೆಲೆ ಇಬ್ಬರು ಪ್ರೀ-ವೆಡ್ಡಿಂಗ್ ಶೂಟ್‌ಗಾಗಿ ತೆರಳಿದ್ದರು. ಮು ಇನ್ನು ಕರಿಯಪ್ಪನ ಜೊತೆಗೆ ಆತನ ಅಣ್ಣ ರಮೇಶ್‌ನದ್ದು ಕೂಡ ವಿವಾಹ ನಿಶ್ಚಿತವಾಗಿತ್ತು. ಹೀಗಾಗಿ ಸಹೋದರರಿಬ್ಬರೂ ಸಹ ಫೋಟೋಶೂಟ್‌ಗೆ ತೆರಳಿದ್ದರು. ಫೋಟೋಶೂಟ್ ಬಳಿಕ ರಮೇಶ್ ಊರಿಗೆ ತೆರಳಿದರೆ, ಕರಿಯಪ್ಪ, ತನ್ನ ಭಾವಿ ಪತ್ನಿಯನ್ನು ಊರಿಗೆ ಬಿಡಲು ಹೊರಟಾಗ ಈ ದುರ್ಘಟನೆ ಸಂಭವಿಸಿದೆ. ಕರಿಯಪ್ಪ ಹಾಗೂ ಕವಿತಾ ಮನೆಯವರಿಬ್ಬರು ಮದುವೆಗೆ ಎಲ್ಲ ತಯಾರಿ ಮಾಡಿಕೊಂಡಿದ್ದರು.



ಆದರೆ ವಿಧಿಯಾಟ ಮಾತ್ರ ಇಬ್ಬರನ್ನು ಹಸೆಮಣೆಗೆ ಏರಿಸುವ ಬದಲು ಮಸಣವನ್ನು ಸೇರಿಸಿದೆ ನಿರಾಬಾದ್‌ನ ಪಂಪಾವನ, ಕೂಕನಪಳ್ಳಿಯ ಬೂದೇಶ್ವರ ದೇವಸ್ಥಾನ ಬಳಿ ಪ್ರೀ-ವೆಡ್ಡಿಂಗ್ ಫೋಟೋಶೂಟ್ ಮಾಡಿಸಿಕೊಂಡಿದ್ದರು. ಬಳಿಕ ಮೃತ ಕರಿಯಪ್ಪ, ಕವಿತಾಳನ್ನು ಬೈಕ್ ಮೇಲೆ ಮುಷ್ಟೂರಿಗೆ ಕರೆದುಕೊಂಡು ಹೋಗುತ್ತಿದ್ದರು. ಈ ವೇಳೆ ಚಿಕ್ಕಬೆಣಕಲ್ ಗ್ರಾಮದ ಬಳಿ ಲಾರಿಯನ್ನು ಓವರ್ ಟೇಕ್ ಮಾಡುವಾಗ ಎದುರಿಗೆ ಬಂದ ಲಾರಿಯೊಂದು ಡಿಕ್ಕಿ ಹೊಡೆದಿದೆ. ಪರಿಣಾಮ ಕವಿತಾ ಸ್ಥಳದಲ್ಲೇ ಸಾವನ್ನಪ್ಪಿದ್ದು, ಕರಿಯಪ್ಪ ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಸಾವನ್ನಪ್ಪಿದ್ದಾರೆ.

ಸ್ಥಳಕ್ಕೆ ಗಂಗಾವತಿ ಗ್ರಾಮೀಣ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಸದ್ಯ ಈ ಸಂಬಂಧ ಪ್ರಕರಣ ದಾಖಲು ಮಾಡಿ, ತನಿಖೆ ಆರಂಭಿಸಿದ್ದಾರೆ.

## ಕರ್ನಾಟಕ ಮಾದಿಗ ದಂಡೊರ ಯುವ ಘಟಕ ಸ್ಥಾಪನೆ ಜಿ. ಮಾರಪ್ಪ



**ದೇವನಹಳ್ಳಿ**:- ಕರ್ನಾಟಕ ಮಾದಿಗ ದಂಡೂರ ಯುವ ಘಟಕ ಅಧ್ಯಕ್ಷರಾಗಿ ರಘು ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು ಎಂದು ಕರ್ನಾಟಕ ಮಾದಿಗ ದಂಡೂರ ಮೀಸಲಾತಿ ಹೋರಾಟ ಸಮಿತಿ ಜಿಲ್ಲಾಧ್ಯಕ್ಷ ಹೇಳಿದರು.

ದೇವನಹಳ್ಳಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ಮಾದಿಗ ದಂಡೊರ ಯುವ ಘಟಕ ನೂತನ ಪದಾಧಿಕಾರಿ ಗಳು ಆಯ್ಕೆ ಸಂಬಂಧ ನಡೆದ ಸಭೆಯಲ್ಲಿ ಮಾತನಾಡಿ, ಸಮಾಜದಲ್ಲಿ ಇಂದಿಗೂ ಜಾತಿ ತಾರತಮ್ಯ ಜೀವಂತವಿದ್ದು ತೊಡೆದು ಹಾಕಲು ಕರ್ನಾಟಕ ಮಾದಿಗ ದಂಡೊರ ಯುವ ಘಟಕ ಅತ್ಯವಶ್ಯಕವಾಗಿದೆ ಎಂದು ಜನಾಂಗದ ಜಿಲ್ಲಾಧ್ಯಕ್ಷ ಜಿ. ಮಾರಪ್ಪ ಯುವ ಪೀಳಿಗೆಗೆ ತಿಳುವಳಿಕೆ ಮೂಡಿಸ ಬೇಕಿದೆ.

ಮಾದಿಗ ಸಮುದಾಯ ಶಿಕ್ಷಣ ಉದ್ಯೋಗ ಹಾಗೂ ರಾಜಕೀಯ ಕ್ಷೇತ್ರದಲ್ಲಿ ಪ್ರಗತಿ ಹೊಂದಿದ್ದರೆ ಮಾತ್ರ ಜನಾಂಗದ ಬೆಳಿಗ್ಗೆ ಸಾಧ್ಯ ಹಾಗಾಗಿ ರಾಜ್ಯದಂತ ಯುವ ಘಟಕವನ್ನು ಸ್ಥಾಪಿಸಿ ಅವರಲ್ಲಿ ಜನಾಂಗದ ಅಭಿವೃದ್ಧಿಗೆ ಸಾಕಷ್ಟು ಶ್ರಮಿಸುವ ಕಾರ್ಯ ಗಳನ್ನು ನಡೆಸಲಾ ಗುತ್ತದೆ ದೇವ ನಹಳ್ಳಿ ತಾಲೂಕಿನಲ್ಲಿ ಬರುವ ತೂಬಗೆರೆ, ಕುಂದಾಣ ವಿಜಯಪುರ ಚನ್ನರಾಯ ಪಟ್ಟಣ, ದೇವನಹಳ್ಳಿ ಕಸಬಾ ಒಳಗೊಂಡಂತೆ

ಎಲ್ಲಾ ಹೋಬಳಿಗಳಲ್ಲಿ ಮಾಡಿದ ಯುವ ಪಡೆಯನ್ನು ಸಂಘಟಿಸ ಬೇಕು ಜನಾಂಗ ಬಲವರ್ತನೆ ಆದರೆ ಮಾತ್ರ ಸಾಮಾಜಿಕ ಪದ್ಧತಿ ಬೆಳೆಯುವುದಲ್ಲದೆ ಆರ್ಥಿಕ ಸಾಮಾಜಿಕ ಶೈಕ್ಷಣಿಕ ಏಳಿಗೆಗಾಗಿ ಶ್ರಮಿಸಲು ಸಾಧ್ಯ ಹಾಗೂ ತಿಂಗಳುಗಳ ಪರಿಶ್ರ ಮದ ಪರಿಶ್ರಮದಿಂದ ತಾಲೂಕು ಯುವ ಕಮಿಟಿ ರಚನೆ ಮಾಡಲಾಗಿದೆ. ರಾಜ್ಯ ಸಂಘದ ಸೂಚನೆ ಮೇರೆಗೆ ಪ್ರತಿ ತಿಂಗಳ ಮಾಸಿಕ ಸಭೆಯನ್ನು ಕರೆದು ಕುಂದು ಕೊರತೆಗಳ ಬಗ್ಗೆ ಚರ್ಚಿಸಿ ಅಗತ್ಯ ಯೋಜನೆಗಳನ್ನು ರೂಪಿಸಬೇಕೆಂದು ತಿಳುವಳಿಕೆ ನೀಡಿದರು.

ಈ ಸಂದರ್ಭದಲ್ಲಿ ದೇವನಹಳ್ಳಿ, ತಾಲೂಕು ಅಧ್ಯಕ್ಷ ವೆಂಕ ಟೇಶ, ಖಜಾಂಚಿ ಸಾವಕನಹಳ್ಳಿ ಶ್ರೀನಿವಾಸ, ತಾಲೂಕು ಕಾರ್ಯದರ್ಶಿ ಸಾದಹಳ್ಳಿ ಮಂಜುನಾಥ್, ತಾಲೂಕು ಯುವ ಘಟಕದ ಉಪಾಧ್ಯಕ್ಷ ವಿ. ಮುನೇಂದ್ರ,ಸಂಘಟನಾ ಕಾರ್ಯ ದರ್ಶಿ ವೆಂಕಟೇಶ್, ಕಾರ್ಯದರ್ಶಿ ದೇವರಾಜು, ಸೇರಿದಂತೆ ಜನಾಂಗದ ಯುವ ಪದಾಧಿಕಾರಿಗಳು ಹಾಜರಿದ್ದರು.

## ಮಹಿಳಾ ಮತ್ತು ಮಕ್ಕಳೊಂದಿಗಿನ ಗ್ರಾಮ ಸಭೆಗೆ ಅಧಿಕಾರಿಗಳ ಗೈರು: ಗ್ರಾಮಸ್ಥರ ಆಕ್ರೋಶ



**ನೆಲಮಂಗಲ**: ಸೋಲೂರು ಹೋಬಳಿಯ ಮೋಟಗೊಂಡನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ 2025-26ನೇ ಸಾಲಿನ ಗ್ರಾಮ ಸಭೆಯನ್ನು ಮಹಿಳಾ ಮತ್ತು ಮಕ್ಕಳ ಗ್ರಾಮ ಸಭೆಯೊಂದಿಗೆ ಒಟ್ಟಿಗೆ ಆಯೋಜಿಸಲಾಗಿತ್ತು.

ಅಧಿಕಾರಿಗಳ ಗೈರು: ಸಭೆಗೆ ಅನೇಕ ಇಲಾಖೆಯ ಅಧಿಕಾರಿಗಳು ಗೈರು ಹಾಜರಾಗಿದ್ದಕ್ಕೆ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಅಧಿಕಾರಿಗಳಿಲ್ಲದೆ ಸಭೆ "ಕಾಟಾಚಾರಕ್ಕೆ" ನಡೆಯುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಲಾಯಿತು. ಗ್ರಾಮಸ್ಥರ ಆಗ್ರಹ: ಗೈರು ಹಾಜರಾದ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮುಂದಿನ ಸಭೆಗಳಿಗೆ ಕಡ್ಡಾಯವಾಗಿ ಹಾಜರಾಗಲು ಪತ್ರವ್ಯವಹಾರ ಮಾಡುವಂತೆ ಗ್ರಾಮಸ್ಥರು ಆಗ್ರಹಿಸಿದರು. ಆಸ್ಪತ್ರೆಯ ಅವ್ಯವಸ್ಥೆ: ಗ್ರಾಮದ ಆಸ್ಪತ್ರೆಯಲ್ಲಿ ಸರಿಯಾದ ವ್ಯವಸ್ಥೆ ಇಲ್ಲದ ಬಗ್ಗೆ ಗ್ರಾಮಸ್ಥರು ಧ್ವನಿ ಎತ್ತಿದರು.

ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಆಕ್ರೋಶ ವ್ಯಕ್ತಪಡಿಸಿ, ಶೀಘ್ರದಲ್ಲೇ ಸೂಕ್ತ ವ್ಯವಸ್ಥೆ ಕಲ್ಪಿಸುವಂತೆ ಒತ್ತಾಯಿಸಲಾಯಿತು. ಮೂಲಭೂತ ಸೌಕರ್ಯಗಳ ಬೇಡಿಕೆ: ಗ್ರಾಮಸ್ಥರು ಹತ್ತು ಹಲವು ಸಮಸ್ಯೆಗಳ ಕುರಿತು ಚರ್ಚಿಸಿ ಮತ್ತು ಗ್ರಾಮಕ್ಕೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಕೊಡುವಂತೆ ಆಗ್ರಹಿಸಿದರು. ಅಧ್ಯಕ್ಷರ ಪ್ರತಿಕ್ರಿಯೆ: ಗ್ರಾಮ ಪಂಚಾಯಿತಿ ಅಧ್ಯಕ್ಷ ಎಂ.ಆರ್. ಶಿವಕುಮಾರ್ ಅವರು, ಚರ್ಚೆಯಾದ ಎಲ್ಲಾ ವಿಷಯಗಳನ್ನು ನೋಂದಣಿ ಪುಸ್ತಕದಲ್ಲಿ ದಾಖಲಿಸಲಾಗಿದೆ ಮತ್ತು ಸಂಬಂಧಿಸಿದ ಇಲಾಖೆಗಳಿಗೆ ಪತ್ರವ್ಯವಹಾರ ಮಾಡಲಾಗುವುದು ಎಂದು ಭರವಸೆ ನೀಡಿದರು. ಮುಂದಿನ ಸಭೆಗೆ ಎಚ್ಚರಿಕೆ: ಕೆಲವು ಅಧಿಕಾರಿಗಳು ಮತ್ತು ಮುಖಂಡರು ಗೈರಾಗಿರುವುದನ್ನು ಗಮನಿಸಿ,

ಮುಂದಿನ ಸಭೆಯಲ್ಲಿ ಎಲ್ಲಾ ಇಲಾಖೆ ಅಧಿಕಾರಿಗಳು ಮತ್ತು ಮುಖಂಡರನ್ನು ಸೇರಿಸಿ ಸಭೆ ನಡೆಸಲಾಗುವುದು ಎಂದು ಅಧ್ಯಕ್ಷರು ತಿಳಿಸಿದರು. ಮಹಿಳಾ ಮತ್ತು ಮಕ್ಕಳ ಸಭೆ: ಮಕ್ಕಳಿಗಾಗಿ ಆಯೋಜಿಸಿದ್ದ ಈ ಸಭೆಯು ಅಧಿಕಾರಿಗಳೊಂದಿಗೆ ಮಾತನಾಡಲು ಉತ್ತಮ ವೇದಿಕೆ ಕಲ್ಪಿಸಿತು. ಮಕ್ಕಳು ತಮ್ಮ ಶಾಲೆಗಳಿಗೆ ಮೂಲಸೌಕರ್ಯ, ಸಿಬ್ಬಂದಿ, ಶುದ್ಧ ಕುಡಿಯುವ ನೀರಿನ ಅಗತ್ಯತೆ ಮತ್ತು ಇತರೆ ಸಮಸ್ಯೆಗಳ ಬಗ್ಗೆ ಚರ್ಚಿಸಿದರು. ಭಾಗವಹಿಸುವ ಮೂಲಕ, ಮಕ್ಕಳು ನಿರ್ಣಾಯಕ ಕೌಶಲ್ಯಗಳನ್ನು ಪಡೆಯುತ್ತಾರೆ ಮಕ್ಕಳು, ತಮ್ಮ ಶಾಲೆಗಳಿಗೆ ಮೂಲಸೌಕರ್ಯ ಮತ್ತು ಸಿಬ್ಬಂದಿ ಅಗತ್ಯತೆಗಳು, ಶುದ್ಧ ಕುಡಿಯುವ ನೀರಿನ ಅಗತ್ಯತೆ, ಮತ್ತು ಇತರೆ ಸಮಸ್ಯೆಗಳಿಗೆ ಕುರಿತು ಚರ್ಚಿಸಿದ್ದಾರೆ ಎಂದರು.ಸಭೆಯಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಚ್ ಉಮೇಶ್ ನಾಯಕ್, ಲೆಕ್ಕ ಸಹಾಯಕರು ವೇಣುಗೋ ಪಾಲ್

ಸುರೇಶ್ ಕುಮಾರ್. B K ಕಾರ್ಯದರ್ಶಿ ಬಿಲ್ ಕಲೆಕ್ಟ ಗಂಗರವಣ್ಣ ಕಂಪ್ಯೂಟರ್ ಆಪರೇಟರ್ ವಿಶ್ವನಾಥ್. ನರಸಿಂಹಮೂರ್ತಿ.. ಗ್ರಾಮ ಪಂಚಾಯಿತಿ ಅಧ್ಯಕ್ಷರು ಎಂ ಆರ್ ಶಿವಕುಮಾರ್ ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರು ಕಮಲಮ್ಮ ಪರಮೇಶ್ ಆಲಿ ಸದಸ್ಯರು. ಅಂಜಿನಪ್ಪನವರು ಗ್ರಾಮ ಪಂಚಾಯಿತಿ ಸದಸ್ಯರು.ಹಾಗೂ ಎಲ್ಲಾ ಗ್ರಾಮ ಪಂಚಾಯಿತಿ ಸದಸ್ಯರು. ಮತ್ತು ಊರಿನ ಗ್ರಾಮಸ್ಥರು ಭಾಗಿಯಾಗಿ

## 7 ದಿನದ ಕಂದಮ್ಮನನ್ನು ಬಿಟ್ಟು ವಿಷ ಸೇವಿಸಿ ಆತ್ಮ ಹತ್ಯೆಗೆ ಶರಣಾದ ದಂಪತಿ

**ಕೋಲಾರ**: ಕೇವಲ ಏಳು ದಿನಗಳ ನವಜಾತ ಹೆಣ್ಣು ಶಿಶುವನ್ನು ಬಿಟ್ಟು, ಅಸ್ಸಾಂ ಮೂಲದ ದಂಪತಿ ವಿಷ ಸೇವಿಸಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ಉಪ್ಪಾರಪಲ್ಲಿ ಗ್ರಾಮದಲ್ಲಿ ನಡೆದಿದೆ.

ಆತ್ಮಹತ್ಯೆಗೆ ಶರಣಾದ ದಂಪತಿಯನ್ನು ರೆಹಮಾನ್ (28) ಮತ್ತು ಅವರ ಪತ್ನಿ ಫರಿಜಾ (22) ಎಂದು ಗುರುತಿಸಲಾಗಿದೆ. ಇವರು ಮೂಲತಃ ಅಸ್ಸಾಂ ರಾಜ್ಯದವರಾಗಿದ್ದು, ಕೆಲಸ ಅರಸಿ ಕರ್ನಾಟಕಕ್ಕೆ ಬಂದಿದ್ದರು. ಕೇವಲ ಹದಿನೈದು ದಿನಗಳ ಹಿಂದೆ ಶ್ರೀನಿವಾಸರೆಡ್ಡಿ ಎಂಬುವವರಿಗೆ ಸೇರಿದ ಕೋಳಿ ಫಾರಂನಲ್ಲಿ ಕೆಲಸಕ್ಕೆ ಸೇರಿದ್ದರು.

ಈ ದಂಪತಿ ಕಷ್ಟಪಟ್ಟು ದುಡಿದು ನೆಮ್ಮದಿಯಿಂದ ಜೀವನ ಸಾಗಿಸುವ ಕನಸು ಕಂಡಿದ್ದರು. ಆತ್ಮಹತ್ಯೆಗೆ ಶರಣಾಗುವ ಕೇವಲ ಏಳು ದಿನಗಳ ಹಿಂದೆ, ಫರಿಜಾ ಅವರು ಒಂದು ಮುದ್ದಾದ ಹೆಣ್ಣು ಮಗುವಿಗೆ ಜನ್ಮ ನೀಡಿದ್ದರು. ಕೋಳಿ ಫಾರಂನ ಆವರಣದಲ್ಲಿಯೇ ವಾಸವಿದ್ದ ದಂಪತಿ, ಮಗುವಿನ ಆಗಮ ನದಿಂದ ಸಂತೋಷದಲ್ಲಿದ್ದರು ಎನ್ನಲಾಗಿದೆ.

ಯಾವ ಕಾರಣಕ್ಕಾಗಿ ಎಂಬುದು ನಿಖರವಾಗಿ ತಿಳಿದಿಲ್ಲವಾದರೂ, ರೆಹಮಾನ್ ಮತ್ತು ಫರಿಜಾ ದಂಪತಿ ಇದ್ದಕ್ಕಿದ್ದಂತೆ ವಿಷ ಸೇವಿಸಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ಕೋಳಿ ಫಾರಂನಲ್ಲಿ ಕೆಲಸಗಾರರು ಅಥವಾ ಮಾಲೀಕರು ಗಮನಿಸಿದಾಗ, ದಂಪತಿ ಪ್ರಜ್ಞಾಹೀನ ಸ್ಥಿತಿಯಲ್ಲಿ ಕಂಡುಬಂದಿದ್ದಾರೆ. ಕೂಡಲೇ ಅವರನ್ನು ಆಸ್ಪತ್ರೆಗೆ ಸಾಗಿಸುವ ಪ್ರಯತ್ನ ಮಾಡಿದ್ದರೂ ದಂಪತಿಗಳು ಸಾವನ್ನಪ್ಪಿದ್ದಾರೆ.

ಹುಟ್ಟಿದ ಒಂದೇ ವಾರದಲ್ಲಿ ತಾಯಿ-ತಂದೆಯನ್ನು ಕಳೆದುಕೊಂಡಿರುವ ಈ ನವಜಾತ ಶಿಶುವಿನ ಭವಿಷ್ಯದ ಕುರಿತು ಸ್ಥಳೀಯರು ಮತ್ತು ಅಧಿಕಾರಿಗಳಲ್ಲಿ ಕಳವಳ ವ್ಯಕ್ತಪಡಿಸಿದ್ದಾರೆ. ಸದ್ಯ ಮಗುವನ್ನು ಸ್ಥಳೀಯ ಮಕ್ಕಳ ಕಲ್ಯಾಣ ಸಮಿತಿ ಯವರಿಗೆ ಅಥವಾ ಸಂಬಂಧಿಕರಿಗೆ ಹಸ್ತಾಂತರಿಸುವ ಕುರಿತು ಪೊಲೀಸರು ಕ್ರಮ ಕೈಗೊಂಡಿದ್ದಾರೆ.

ಪೊಲೀಸರ ಪ್ರಾಥಮಿಕ ತನಿಖೆಯಲ್ಲಿ ಆತ್ಮಹತ್ಯೆಗೆ ನಿಖರವಾದ ಕಾರಣ ತಿಳಿದುಬಂದಿಲ್ಲ. ಆರ್ಥಿಕ ಸಮಸ್ಯೆಗಳು, ಕೌಟುಂಬಿಕ ಒತ್ತಡ ಅಥವಾ ಇನ್ನ್ಯಾವುದೋ ವೈಯಕ್ತಿಕ ಸಮಸ್ಯೆಗಳು ಈ ದುರಂತಕ್ಕೆ ಕಾರಣವಾಗಿರಬಹುದೇ ಎಂಬುದರ ಕುರಿತು ರಾಯಲ್ಪಾಡು ಪೊಲೀಸರು ತನಿಖೆ ಮುಂದುವರೆಸಿದ್ದಾರೆ. ದಂಪತಿ ಬೇರೆ ರಾಜ್ಯದಿಂದ ಬಂದಿರುವ ಕಾರಣ, ಅವರ ಕುಟುಂಬ ಸದಸ್ಯರನ್ನು ಪತ್ತೆ ಹಚ್ಚಿ, ಇವರ ಸಾವಿಗೆ ಕಾರಣವಾದ ಅಂಶಗಳ ಕುರಿತು ಮಾಹಿತಿ ಸಂಗ್ರಹಿಸುವ ಕಾರ್ಯ ನಡೆದಿದೆ.

ಮಹಿಳೆ ಕತ್ತು ಕೊಯ್ದು ಬರ್ಬರ ಹತ್ಯೆ ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲೂಕಿನಲ್ಲಿ ಒಂಟಿ ಮನೆಯಲ್ಲಿದ್ದ 45 ವರ್ಷಯ ಮಹಿಳೆಯನ್ನು ಕತ್ತು ಕೊಯ್ದು ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಬೆಳಕಿಗೆ ಬಂದಿದೆ. ಕೊಲೆಗೀಡಾದವರು ಬ್ಯಾಡಗಿ ತಾಲೂಕಿನ ಕೆರೂಡಿ ಗ್ರಾಮದ ನಿವಾಸಿ ಲಲಿತಾ ಕರಬಸಪ್ಪ ಬ್ಯಾಡಗಿ (45) ಎಂದು ಪತ್ತೆಯಾಗಿದೆ. ಈ ಘಟನೆ ದೇವರಗುಡ್ಡ ರಸ್ತೆಯ ಪ್ರದೇಶದಲ್ಲಿ ನಡೆದಿದ್ದು, ರಾಣೇಬೆನ್ನೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ಲಲಿತಾ ತಮ್ಮ ಮಕ್ಕಳೊಂದಿಗೆ ಆ ಮನೆಯಲ್ಲಿ ವಾಸವಾಗಿದ್ದರು. ಘಟನೆಯ ದಿನ ಮನೆಯಲ್ಲಿ ಮಕ್ಕಳು ಇರದಿದ್ದ ಸಂದರ್ಭದಲ್ಲಿ ಈ ಘಟನೆ ಸಂಭವಿಸಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಕೊಲೆಯ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ಘಟನೆ ಸಂಬಂಧ ಪೊಲೀಸರು ತೀವ್ರ ತನಿಖೆ ಪ್ರಾರಂಭಿಸಿದ್ದಾರೆ. ಆರೋಪಿಗಾಗಿ ಹುಡುಕಾಟ ನಡೆಸಿದ್ದಾರೆ.

ಡಿವೈಡರ್‌ಗೆ ಕಾರು ಡಿಕ್ಕಿ ಸ್ಥಳದಲ್ಲೇ ಮೂವರು ಸಾವು ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ನಾಗತಿಹಳ್ಳಿ ಬಳಿ ಭೀಕರ ರಸ್ತೆ ಅಪಘಾತ ಸಂಭವಿಸಿದೆ. ಡಿವೈಡರ್‌ಗೆ ಡಿಕ್ಕಿ ಹೊಡೆದ ಕಾರು ಪಲ್ಟಿಯಾಗಿ ಬಿದ್ದ ಈ ದುರಂತದಲ್ಲಿ ಮೂವರು ಪ್ರಾಣಬಿಟ್ಟಿದ್ದಾರೆ. ಮೃತಪಟ್ಟವರು ಚಿಕ್ಕಮಗಳೂರು ಮೂಲದ ಚನ್ನೇಗೌಡ (60), ಸರೋಜಮ್ಮ (55) ಮತ್ತು ಜಯಮ್ಮ (71) ಎಂದು ಗುರುತಿಸಲಾಗಿದೆ.

ವೇಗವಾಗಿ ಹೋಗುತ್ತಿದ್ದ ಕಾರು ಚಾಲಕನ ನಿಯಂತ್ರಣ ತಪ್ಪಿ, ರಸ್ತೆಯ ಕಾಂಕ್ರೀಟ್ ಡಿವೈಡರ್‌ಗೆ ಅತೀ ವೇಗವಾಗಿ ಡಿಕ್ಕಿ ಹೊಡೆದಿದೆ. ಡಿಕ್ಕಿಯ ಫಲಿತಾಂಶವಾಗಿ ಕಾರು ಪಲ್ಟಿ ಹೊಡೆದು, ರಸ್ತೆಯ ಪಕ್ಕದಲ್ಲಿ ಬಿದ್ದಿದೆ. ಘಟನೆ ತೀವ್ರತರದ್ದಾಗಿದ್ದು, ಮೂವರೂ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಸುದ್ದಿ ತಿಳಿಯುತ್ತಿದ್ದಂತೆ ಸ್ಥಳೀಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶಿಲನೆ ನಡೆಸಿದ್ದಾರೆ.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಇಂಡಿಗೋ ವಿಮಾನಯಾನ ಬಿಕ್ಕಟ್ಟು ಪ್ರಯಾಣಿಕರಿಗೆ 610 ಕೋಟಿ ರೂ. ಮರುಪಾವತಿಸಿದ ಸಂಸ್ಥೆ



**ನವದೆಹಲಿ:** ಕಳೆದ ಕೆಲವು ದಿನಗಳಿಂದ ಇಂಡಿಗೋ ವಿಮಾನ ಯಾನ ಸಂಸ್ಥೆಯಲ್ಲಿ ಉಂಟಾಗಿದ್ದ ವ್ಯಾಪಕ ವಿಮಾನ ರದ್ದತಿ ಮತ್ತು ವಿಳಂಬ ಬಿಕ್ಕಟ್ಟು ಹಂತ ಹಂತವಾಗಿ ಸಡಿಲಗೊಳ್ಳುವ ಲಕ್ಷಣಗಳು ಕಾಣಿಸುತ್ತಿವೆ. ಈ ಅಡಚಣೆ ಯಿಂದ ತೊಂದರೆಗೊಳಗಾದ ಪ್ರಯಾಣಿಕರಿಗೆ ವಿಮಾನಯಾನ ಸಂಸ್ಥೆಯು ಇದುವರೆಗೆ ₹ 610 ಕೋಟಿಗಳ ಮರುಪಾವ ತಿಯನ್ನು ಪ್ರಕ್ರಿಯೆಗೊಳಿಸಿದೆ ಎಂದು ನಾಗರಿಕ ವಿಮಾನಯಾನ ಸಚಿವಾಲಯ ಭಾನುವಾರ ತಿಳಿಸಿದೆ.

ಕಳೆದ ಕೆಲವು ದಿನಗಳಲ್ಲಿ ನೂರಾರು ವಿಮಾನಗಳನ್ನು ರದ್ದುಗೊಳಿಸಿದ್ದ ಇಂಡಿಗೋ, ಸಾವಿರಾರು ಪ್ರಯಾಣಿಕರಿಗೆ ತೊಂದರೆ ಉಂಟುಮಾಡಿತ್ತು. ಆದರೆ, ಸಚಿವಾಲಯದ ತ್ವರಿತ ಕ್ರಮಗಳ ಫಲವಾಗಿ ಪರಿಸ್ಥಿತಿ ಸ್ಥಿರಗೊಳ್ಳುತ್ತಿದೆ. ದೇಶದ ಅತಿದೊಡ್ಡ ವಿಮಾನಯಾನ ಸಂಸ್ಥೆಯಾದ ಇಂಡಿಗೋ ಸಾಮಾನ್ಯವಾಗಿ ಪ್ರತಿದಿನ ಸುಮಾರು 2,300 ವಿಮಾನಗಳನ್ನು ನಿರ್ವಹಿಸುತ್ತದೆ. ಈ ಬಿಕ್ಕಟ್ಟಿನ ಮಧ್ಯೆಯೂ ಶನಿವಾರ ಸುಮಾರು 1,500 ವಿಮಾನಗಳನ್ನು ನಿರ್ವಹಿಸಿದ್ದು, ಭಾನುವಾರದ ಸಂಜೆಯ ವೇಳೆಗೆ ಈ ಸಂಖ್ಯೆ 1,650 ಕ್ಕೆ ತಲುಪುವ ಸಾಧ್ಯತೆ ಇದೆ ಎಂದು ಸಚಿವಾಲಯ ಮಾಹಿತಿ ನೀಡಿದೆ. ನಾಗರಿಕ ವಿಮಾನ ಯಾನ ಸಚಿವಾಲ ಯವು ಇಂಡಿಗೋ ಕಾರ್ಯಾ ಚರಣೆಯ ಬಿಕ್ಕಟ್ಟಿನಿಂದ ಉಂಟಾದ ಅಡಚಣೆ ಯನ್ನು ಪರಿಹರಿಸಲು ತ್ವರಿತ ಮತ್ತು ನಿರ್ಣಾಯಕ ಕ್ರಮಗ ಳನ್ನು ತೆಗೆದುಕೊಂಡಿದೆ. ಇತರ ಎಲ್ಲಾ ದೇಶೀಯ ವಿಮಾನಯಾನ ಸಂಸ್ಥೆಗಳು ಸರಾಗವಾಗಿ ಪೂರ್ಣ ಸಾಮರ್ಥ್ಯ ದಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ದೇಶಾದ್ಯಂತ ವಿಮಾನ ಪ್ರಯಾಣ ಕಾರ್ಯಾಚರಣೆಗಳು ತ್ವರಿತ ಗತಿಯಲ್ಲಿ ಸ್ಥಿರವಾಗುತ್ತಿವೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಇಂಡಿಗೋದ ಕಾರ್ಯಕ್ಷಮತೆ ಇಂದು ಸುಧಾರಣೆಯನ್ನುಕಂಡಿದ್ದು, ವಿಮಾನ ವೇಳಾಪಟ್ಟಿಗಳು ಸಾಮಾನ್ಯ ಮಟ್ಟಕ್ಕೆ ಮರಳುತ್ತಿವೆ.

ಇಂಡಿಗೋ ಸಿಇಒ ಪೀಟರ್ ಎಲ್ಬರ್ಸ್ ಅವರು ಭಾನುವಾರದಂದು ಆಂತರಿಕ ವೀಡಿಯೊ ಸಂದೇಶದಲ್ಲಿ, ವಿಮಾನಯಾನ ಸಂಸ್ಥೆಯು ಸುಮಾರು 1,650 ವಿಮಾನಗಳನ್ನು ನಿರ್ವಹಿಸಲಿದ್ದು, ಹಂತ ಹಂತವಾಗಿ ನಾವು ಮತ್ತೆ ಸೇವೆಗೆ ಮರಳುತ್ತಿದ್ದೇವೆ ಎಂದು ಹೇಳಿದ್ದಾರೆ. ಅಲ್ಲದೆ, ವಿಮಾನಯಾನ ಸಂಸ್ಥೆಯ ಆನ್ ಟೈಮ್ ಪರ್ಫಾರ್ಮೆನ್ಸ್ (OTP) ಭಾನುವಾರ ಶೇ. 75 ರಷ್ಟು ಇರಬಹುದು ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ವಿಮಾನ ರದ್ದತಿಯ ಕಾರಣದಿಂದಾಗಿ ಬೇಡಿಕೆಯಲ್ಲಿ ಬದಲಾವಣೆಯಾಗಿ ವಿಮಾನ ದರಗಳು ತಾತ್ಕಾಲಿಕವಾಗಿ ಏರಿಕೆಯಾಗಿದ್ದವು. ಈ ಹಿನ್ನೆಲೆಯಲ್ಲಿ ಸಚಿವಾಲಯ ಮಧ್ಯಪ್ರವೇಶಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ವಿಮಾನ ದರಗಳ ಮೇಲೆ ನಿಗದಿತ ಮಿತಿ ಘೋಷಿಸಿತು.

ಈ ಕ್ರಮವು ಪ್ರಯಾಣಿಕರಿಗೆ ನ್ಯಾಯಯುತ ಮತ್ತು ಕೈಗೆಟುಕುವ ದರಗಳನ್ನು ಖಚಿತಪಡಿಸಿದೆ. ಪರಿಷ್ಕೃತ ದರ ರಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ವಿಮಾನಯಾನ ಸಂಸ್ಥೆಗಳಿಗೆ ಸೂಚನೆ ನೀಡಲಾಗಿದೆ. ರದ್ದಾದ ಅಥವಾ ವಿಳಂಬವಾದ ವಿಮಾನಗಳ ಎಲ್ಲಾ ಮರುಪಾವತಿಗಳನ್ನು ಭಾನುವಾರ ರಾತ್ರಿ 8:00 ಗಂಟೆಯೊಳಗೆ ಪೂರ್ಣಗೊ ಳಿಸುವಂತೆ ಸಚಿವಾಲಯವು ಇಂಡಿಗೋಗೆ ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡಿತ್ತು. ಇಂಡಿಗೋ ಇಲ್ಲಿಯವರೆಗೆ ಒಟ್ಟು ₹ 610 ಕೋಟಿ ಮರುಪಾವತಿಯನ್ನು ಪ್ರಕ್ರಿಯೆಗೊಳಿಸಿದೆ.


ರದ್ದತಿಯಿಂದ ಪ್ರಭಾವಿತವಾದ ಪ್ರಯಾಣವನ್ನು ಮರು ವೇಳಾಪಟ್ಟಿ) ಮಾಡಲು ಯಾವುದೇ ಹೆಚ್ಚುವರಿ ಶುಲ್ಕಗಳನ್ನು ವಿಧಿಸುವುದನ್ನು ನಿಷೇಧಿಸಲಾಗಿದೆ.

ಸಚಿವಾಲಯದ ಸೂಚನೆಯ ಮೇರೆಗೆ, 48 ಗಂಟೆಗಳ ಒಳಗೆ ಅಡೆತಡೆಗಳಿಂದಾಗಿ ಪ್ರಯಾಣಿಕರಿಂದ ಬೇರ್ಪಟ್ಟ ಎಲ್ಲಾ ಸಾಮಾನುಗಳನ್ನು ಪತ್ತೆಹಚ್ಚಿ ತಲುಪಿಸಲು ಇಂಡಿಗೋ ಕ್ರಮ ಕೈಗೊಂಡಿದೆ. ಈ ಪ್ರಯತ್ನದೊಂದಿಗೆ, ಇಂಡಿಗೋ ಶನಿವಾರದ ವೇಳೆಗೆ ಭಾರತದಾದ್ಯಂತ ಪ್ರಯಾಣಿಕರಿಗೆ ಸುಮಾರು 3,000 ಬ್ಯಾಗೇಜ್‌ಗಳನ್ನು ಯಶಸ್ವಿಯಾಗಿ ವಿತರಿಸಿದೆ.

ದೆಹಲಿ, ಮುಂಬೈ, ಬೆಂಗಳೂರು, ಚೆನ್ನೈ, ಹೈದರಾಬಾದ್, ಅಹಮದಾಬಾದ್ ಮತ್ತು ಗೋವಾದ ವಿಮಾನ ನಿಲ್ದಾಣ ನಿರ್ದೇಶಕರು ಇಂದು ಟರ್ಮಿನಲ್‌ಗಳಲ್ಲಿ ಸಾಮಾನ್ಯ ಪರಿಸ್ಥಿತಿಯನ್ನು ದೃಢಪಡಿಸಿದ್ದಾರೆ. ಚೆಕ್-ಇನ್, ಭದ್ರತೆ ಅಥವಾ ಬೋರ್ಡಿಂಗ್ ಪಾಯಿಂಟ್‌ಗಳಲ್ಲಿ ಜನಸಂದಣಿಯಿಲ್ಲದೆ ಪ್ರಯಾಣಿಕರ ಚಲನೆ ಸುಗಮವಾಗಿದೆ. ನಾಗರಿಕ ವಿಮಾನಯಾನ ಸಚಿವಾಲಯದ 24×7 ನಿಯಂತ್ರಣ ಕೊಠಡಿಯು ಸಮಗ್ರ ಸಮನ್ವಯ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತಿದೆ.

## ಮೆಕ್ಕೆಜೋಳ ಖರೀದಿ ಮಿತಿ 50 ಕ್ವಿಂಟಾಲ್‌ಗೆ ಹೆಚ್ಚಿಸಿದ ರಾಜ್ಯ ಸರ್ಕಾರ !

**ಬೆಂಗಳೂರು:** ಇತ್ತೀಚೆಗೆ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಮೆಕ್ಕೆಜೋಳ ಖರೀದಿಗೆ ಸೂಕ್ತ ವ್ಯವಸ್ಥೆ ಮಾಡುವಂತೆ ಆಗ್ರಹಿಸಿ ವ್ಯಾಪಕ ಪ್ರತಿಭಟನೆಗಳು ನಡೆದಿದ್ದವು. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಭಾನುವಾರ ಮಹತ್ವದ ಆದೇಶವನ್ನು ಹೊರಡಿಸಿದೆ. ರೈತರಿಂದ ಮೆಕ್ಕೆಜೋಳ ಖರೀದಿಯ ಗರಿಷ್ಠ ಮಿತಿಯನ್ನು ಪ್ರತಿ ರೈತರಿಗೆ 20 ಕ್ವಿಂಟಾಲ್‌ನಿಂದ 50 ಕ್ವಿಂಟಾಲ್‌ಗೆ ಹೆಚ್ಚಿಸಿ ಆದೇಶ ನೀಡಲಾಗಿದೆ. ಈ ನಿರ್ಧಾರದಿಂದಾಗಿ ಬೆಳಗಾವಿ ಅಧಿವೇಶನ ಆರಂಭಕ್ಕೂ ಮುನ್ನವೇ ಮೆಕ್ಕೆಜೋಳ ಬೆಳೆಗಾರರಿಗೆ ದೊಡ್ಡ ಮಟ್ಟದ ನೆರವು ಸಿಕ್ಕಂತಾಗಿದೆ.



ಮೆಕ್ಕೆಜೋಳ ಖರೀದಿಗೆ ಸಂಬಂಧಿಸಿದಂತೆ ಸರ್ಕಾರವು ಈ ಹಿಂದೆಯೇ ಬೆಂಬಲ ಬೆಲೆಯನ್ನು ನಿಗದಿಪಡಿಸಿತ್ತು. ಪ್ರಸ್ತುತ, ಪ್ರತಿ ಕ್ವಿಂಟಾಲ್ ಮೆಕ್ಕೆಜೋಳಕ್ಕೆ 2,400 ರೂ. ಬೆಂಬಲ ಬೆಲೆ ನೀಡಲಾಗುತ್ತದೆ. ಹೆಚ್ಚಿಸಿದ ಖರೀದಿ ಮಿತಿಯೊಂದಿಗೆ ಈ ಬೆಂಬಲ ಬೆಲೆ ಮುಂದುವರೆಯುವುದರಿಂದ ಸಣ್ಣ ಮತ್ತು ಮಧ್ಯಮ ವರ್ಗದ ರೈತರಿಗೆ ಇದು ಆರ್ಥಿಕವಾಗಿ ದೊಡ್ಡ ಲಾಭ ತರಲಿದೆ.

ಖರೀದಿ ಪ್ರಕ್ರಿಯೆಯು ತಂತ್ರಾಂಶದಲ್ಲಿ ನೋಂದಾಯಿತ ಜಮೀನು ಆಧಾರದ ಮೇಲೆ ನಡೆಯಲಿದೆ. ಸಹಕಾರ ಸಂಘಗಳ ಮೂಲಕ ಮೆಕ್ಕೆಜೋಳ ಖರೀದಿಗೆ ಆದ್ಯತೆ ನೀಡಲಾಗುತ್ತಿದ್ದು, ಇದರಿಂದ ರೈತರು ಮಧ್ಯವರ್ತಿಗಳ ಹಾವಳಿಯಿಲ್ಲದೆ ನೇರವಾಗಿ ಸರ್ಕಾರಕ್ಕೆ ತಮ್ಮ ಉತ್ಪನ್ನವನ್ನು ಮಾರಾಟ ಮಾಡಲು ಸಾಧ್ಯವಾಗುತ್ತದೆ. ಸರ್ಕಾರದ ಹೊಸ ತಿದ್ದುಪಡಿ ಆದೇಶವು ರೈತರ ಹಿತದೃಷ್ಟಿಯಿಂದ ಪ್ರಮುಖ ಬದಲಾವಣೆಗಳನ್ನು ಮಾಡಿದೆ. ಈ ಹಿಂದಿನ ಆದೇಶದಲ್ಲಿ ಪ್ರತಿ ರೈತರಿಗೆ ಖರೀದಿ ಮಿತಿಯನ್ನು 20 ಕ್ವಿಂಟಾಲ್ ಗೆ ನಿಗದಿಪಡಿಸಲಾಗಿತ್ತು. ಆದರೆ, ಈಗಿನ ಆದೇಶದಲ್ಲಿ ಈ ಮಿತಿಯನ್ನು ಗಣನೀಯವಾಗಿ ಹೆಚ್ಚಿಸಲಾಗಿದೆ:

ಹಿಂದಿನ ಆದೇಶ: ತಂತ್ರಾಂಶದಲ್ಲಿ ಲಭ್ಯವಾಗುವ ರೈತರು ಹೊಂದಿರುವ ಜಮೀನಿನ ವಿಸ್ತೀರ್ಣಕ್ಕೆ ಅನುಗುಣವಾಗಿ ಪ್ರತಿ ಎಕರೆಗೆ 12 ಕ್ವಿಂಟಾಲ್‌ನಂತೆ ಪ್ರತಿ ರೈತರಿಂದ ಗರಿಷ್ಟ 20 ಕ್ವಿಂಟಾಲ್ ಮೆಕ್ಕೆಜೋಳ ಉತ್ಪನ್ನವನ್ನು ಬೆಂಬಲ ಬೆಲೆ ದರ ಪ್ರತಿ ಕ್ವಿಂಟಾಲ್‌ಗೆ ರೂ.2400 ರಂತೆ ಖರೀದಿಸಲು ಅವಕಾಶವಿತ್ತು.

ಪ್ರಸ್ತುತ ತಿದ್ದುಪಡಿ: ತಂತ್ರಾಂಶದಲ್ಲಿ ಲಭ್ಯವಾಗುವ ರೈತರು ಹೊಂದಿರುವ ಜಮೀನಿನ ವಿಸ್ತೀರ್ಣಕ್ಕೆ ಅನುಗುಣವಾಗಿ ಪ್ರತಿ ಎಕರೆಗೆ 12 ಕ್ವಿಂಟಾಲ್‌ನಂತೆ ಪ್ರತಿ ರೈತರಿಂದ ಗರಿಷ್ಟ 50 ಕ್ವಿಂಟಾಲ್ ಮೆಕ್ಕೆಜೋಳ ಉತ್ಪನ್ನವನ್ನು ಬೆಂಬಲ ಬೆಲೆ ದರ ಪ್ರತಿ ಕ್ವಿಂಟಾಲ್‌ಗೆ ರೂ.2400 ರಂತೆ ಖರೀದಿಸತಕ್ಕದ್ದು. ಎಂದು ರಾಜ್ಯ ಸರ್ಕಾರ ಸ್ಪಷ್ಟವಾಗಿ ಆದೇಶಿಸಿದೆ.

ಈ ತಿದ್ದುಪಡಿಯ ಮೂಲಕ, ಸರ್ಕಾರವು ಪ್ರತಿ ರೈತರಿಂದ ಖರೀದಿಸುವ ಮೆಕ್ಕೆಜೋಳದ ಪ್ರಮಾಣವನ್ನು ಎರಡೂವರೆ ಪಟ್ಟು ಹೆಚ್ಚಿಸಿದೆ ಮೆಕ್ಕೆಜೋಳ ಖರೀದಿಯ ವಿಚಾರದಲ್ಲಿ ಮತ್ತೊಂದು ಪ್ರಮುಖ ಅಂಶವನ್ನು ಸರ್ಕಾರ ಸೇರಿಸಿದೆ. ಈ ಮೊದಲು ಡಿಸ್ಟಿಲರಿಗಳ ಸಮೀಪದ ಪಿಎಸಿಎಸ್‌ಗಳ (PACS) ಮೂಲಕ ಖರೀದಿಗೆ ಆದ್ಯತೆ ನೀಡಬಾರದು ಎಂದು ನಿರ್ಬಂಧ ವಿಧಿಸಲಾಗಿತ್ತು. ಆದರೆ, ಪ್ರಸ್ತುತ ಆದೇಶದಲ್ಲಿ ಅದನ್ನು ರದ್ದುಗೊಳಿಸಲಾಗಿದೆ.

ಹೊಸ ಆದೇಶ: ಇನ್ನು ಮುಂದೆ "ಡಿಸ್ಟಿಲರಿಗಳ ಸಮೀಪದ PACS ಗಳ ಮೂಲಕ ಖರೀದಿಸಲು ಆದ್ಯತೆ ನೀಡತಕ್ಕದ್ದು ಎಂದು ಸರ್ಕಾರ ಆದೇಶಿಸಿದೆ.

ಈ ನಿರ್ಧಾರದಿಂದಾಗಿ ಮೆಕ್ಕೆಜೋಳವನ್ನು ಕೊಳ್ಳುವ ಡಿಸ್ಟಿಲರಿ ಕಾರ್ಖಾನೆಗಳಿಗೆ ಸುಲಭವಾಗಿ ಮೆಕ್ಕೆಜೋಳ ಲಭ್ಯವಾಗುವ ಸಾಧ್ಯತೆ ಇದೆ. ಅದೇ ಸಮಯದಲ್ಲಿ ರೈತರಿಗೆ ಕೂಡ ತಮ್ಮ ಉತ್ಪನ್ನವನ್ನು ಮಾರಾಟ ಮಾಡಲು ಮತ್ತಷ್ಟು ಅವಕಾಶಗಳು ಸಿಗಲಿವೆ..

## ಡಿಸಿಎಂ ಪವನ್ ಕಲ್ಯಾಣ್‌ಗೆ 'ಅಭಿನವ ಕೃಷ್ಣದೇವರಾಯ' ಪ್ರಶಸ್ತಿ ಪ್ರದಾನ

**ಉಡುಪಿ:** ಆಂಧ್ರಪ್ರದೇಶದ ಉಪಮುಖ್ಯಮಂತ್ರಿ (ಡಿಸಿಎಂ) ಹಾಗೂ ನಟ ಪವನ್ ಕಲ್ಯಾಣ್ ಅವರು ಉಡುಪಿ ಶ್ರೀಕೃಷ್ಣ ಮಠದಲ್ಲಿ ನಡೆದ ಲಕ್ಷ ಕಂಠ ಗೀತಾ ಪಾರಾಯಣದ ಭವ್ಯ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿದರು. ಈ ಸಂದರ್ಭದಲ್ಲಿ ಅವರ ಸನಾತನ ಧರ್ಮ ರಕ್ಷಣೆ ಮತ್ತು ಆದರ್ಶಗಳಿಗಾಗಿ ಅವರನ್ನು 'ಅಭಿನವ ಕೃಷ್ಣದೇವರಾಯ' ಬಿರುದಿನೊಂ ದಿಗೆ ಗೌರವಿಸಲಾಯಿತು.

ಪರ್ಯಾಯ ಶ್ರೀ ಪುತ್ತಿಗೆ ಮಠದ ಪರಮಪೂಜ್ಯ ಶ್ರೀ ಶ್ರೀ ಸುಗುಣೇಂದ್ರ ತೀರ್ಥ ಸ್ವಾಮೀಜಿಯವರು ಪವನ್ ಕಲ್ಯಾಣ್ ಅವರಿಗೆ ಈ ಮಹತ್ವದ ಬಿರುದನ್ನು ಪ್ರದಾನ ಮಾಡಿದರು. ಬಿರುದು ಪ್ರದಾನದ ಕುರಿತು ಮಾತನಾಡಿದ ಪುತ್ತಿಗೆ ಶ್ರೀಗಳು, ಬಿರುದಿಗೆ ಕಾರಣವನ್ನು ವಿವರಿಸಿ, ವಿಜಯನಗರ ಸಾಮ್ರಾಜ್ಯದ ಮಹಾನ್ ಚಕ್ರವರ್ತಿ ಶ್ರೀ ಕೃಷ್ಣದೇವರಾಯ ಅವರು ಪ್ರತಿಯೊಬ್ಬರಿಗೂ ಆದರ್ಶವಾಗುವ ರಾಜ್ಯವನ್ನು ನಿರ್ಮಾಣ ಮಾಡಿದ್ದರು.



ಸನಾತನ ಧರ್ಮದ ರಕ್ಷಣೆ ಮತ್ತು ಉನ್ನತೀಕರಣಕ್ಕಾಗಿ ಪವನ್ ಕಲ್ಯಾಣ್ ಅವರು ಮಾಡುತ್ತಿರುವ ಶ್ರಮ ಶ್ಲಾಘನೀಯ. ಸನಾತನ ಧರ್ಮದ ವಿಚಾರದಲ್ಲಿ ಅವರ ಬದ್ಧತೆ ಮತ್ತು ನಿಲುವನ್ನು ಗುರುತಿಸಿ ಅವರಿಗೆ ಈ ಬಿರುದನ್ನು ನೀಡಲಾಗುತ್ತಿದೆ ಎಂದು ಶ್ರೀಗಳು ಹೇಳಿದರು.

ಸಿನಿಮಾ ಮತ್ತು ರಾಜಕೀಯ ಎರಡರಲ್ಲೂ ಯಶಸ್ಸು ಕಂಡಿರುವ ಪವನ್ ಕಲ್ಯಾಣ್ ಅವರಿಗೆ ಈ ಆಧ್ಯಾತ್ಮಿಕ ಮತ್ತು ಐತಿಹಾಸಿಕ ಬಿರುದು ಸಂದಿರುವುದು, ಅವರ ಜೀವನಕ್ಕೆ ಮತ್ತಷ್ಟು ಗಾಂಭೀರ್ಯ ತಂದಿದೆ.

ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಪವನ್ ಕಲ್ಯಾಣ್ ಅವರು, ಪುತ್ತಿಗೆ ಮಠದ ವತಿಯಿಂದ ಹಮ್ಮಿಕೊಂಡ ಕಾರ್ಯಕ್ರಮವನ್ನು ಕೊಂಡಾಡಿದರು. ಪರಮಪೂಜ್ಯ ಶ್ರೀ ಶ್ರೀ ಸುಗುಣೇಂದ್ರ ತೀರ್ಥ ಸ್ವಾಮೀಜಿಯವರ ದಾರ್ಶ ನಿಕ ಮಾರ್ಗದರ್ಶನದಲ್ಲಿ ಈ ಪವಿತ್ರ ಭೂಮಿ, ಒಂದು ಕೋಟಿ ಕೈಬರಹದ ಭಗವದ್ಗೀತೆ ಯೋಜನೆ ಮತ್ತು ಲಕ್ಷ ಕಂಠ ಪಾರಾಯಣದಂತಹ ಐತಿಹಾಸಿಕ ಆಧ್ಯಾತ್ಮಿಕ ಚಲನೆಗಳಿಗೆ ಸಾಕ್ಷಿಯಾಗುತ್ತಿದೆ.


ಈ ಕಾರ್ಯ ಕ್ರಮವು ಪ್ರಪಂಚದಾದ್ಯಂತದ ಲಕ್ಷಾಂತರ ಜನರಿಗೆ ಸ್ಫೂರ್ತಿ ನೀಡಿದೆ ಎಂದು ಪವನ್ ಕಲ್ಯಾಣ್ ಹೇಳಿದರು.

ಭಗವದ್ಗೀತೆಯ ಸಂದೇಶವು ನಮ್ಮ ಕ್ರಿಯೆಗಳಿಗೆ ಮಾರ್ಗದರ್ಶನ ನೀಡಲಿ, ನಮ್ಮ ಸಮಾಜವನ್ನು ಬಲಪಡಿಸಲಿ ಮತ್ತು ನಮ್ಮ ರಾಷ್ಟ್ರೀಯ ಮನೋಭಾವವನ್ನು ಉನ್ನತೀಕರಿಸಲಿ ಎಂದು ಪವನ್ ಕಲ್ಯಾಣ್ ಕರೆ ನೀಡಿದರು. ಗೀತೆಯ ತತ್ವಗಳು ಇಂದಿನ ಸಮಾಜಕ್ಕೆ ಅತ್ಯಂತ ಅಗತ್ಯ ಎಂದು ಸಾರಿದರು.

ಪವನ್ ಕಲ್ಯಾಣ್ ಅವರು ಈ ಮೊದಲು ಉಡುಪಿಗೆ ಬಂದಾಗ, ಈ ಕ್ಷೇತ್ರವು 'ಡಿವೈನ್ ಪವರ್ ಹೌಸ್' ಎಂದು ಬಣ್ಣಿಸಿದ್ದರು. ಪುತ್ತಿಗೆ ಶ್ರೀಗಳ ವೈಯಕ್ತಿಕ ಆಮಂತ್ರಣದ ಮೇರೆಗೆ ಬಂದಿರುವ ಅವರು, ಭಗವದ್ಗೀತೆಯಂತಹ ಪವಿತ್ರ ಗ್ರಂಥದ ಸಂದೇಶಗಳನ್ನು ಜನರಿಗೆ ತಲುಪಿಸುವ ಈ ಪ್ರಯತ್ನದಲ್ಲಿ ಭಾಗಿಯಾಗಿರುವುದಕ್ಕೆ ಸಂತಸ ವ್ಯಕ್ತಪಡಿಸಿದರು.

ಒಟ್ಟಾರೆಯಾಗಿ, ಉಡುಪಿ ಶ್ರೀಕೃಷ್ಣ ಮಠವು ಆಧ್ಯಾತ್ಮಿಕ ಚಟುವಟಿಕೆಗಳ ಕೇಂದ್ರವಾಗಿ ಮತ್ತೊಮ್ಮೆ ಹೊರಹೊಮ್ಮಿದ್ದು, ಆಂಧ್ರ ಡಿಸಿಎಂ ಪವನ್ ಕಲ್ಯಾಣ್ ಅವರಿಗೆ 'ಅಭಿನವ ಕೃಷ್ಣದೇವರಾಯ' ಬಿರುದು ನೀಡುವ ಮೂಲಕ, ಧಾರ್ಮಿಕ ಮತ್ತು ರಾಜಕೀಯ ಕ್ಷೇತ್ರಕ್ಕೆ ಮಠವು ವಿಶೇಷ ಸಂದೇಶವನ್ನು ರವಾನಿಸಿದೆ.

## ಅನ್ನಭಾಗ್ಯ ಮಾರಾಟಕ್ಕೆ ಬಿಗ್ ಶಾಕ್,570 ಜನರ ಬಂಧನ: ಸಚಿವ ಮುನಿಯಪ್ಪ



ಅನ್ನಭಾಗ್ಯ ಯೋಜನೆಯಡಿ ಬಡವರಿಗೆ ಉಚಿತವಾಗಿ ಸಿಗುತ್ತಿದ್ದ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹಿಸಿ ಮಾರಾಟ ಮಾಡುತ್ತಿದ್ದ ದುಷ್ಕರ್ಮಿಗಳ ಮೇಲೆ ಸರ್ಕಾರ ದೊಡ್ಡ ದಾಳಿ ನಡೆಸಿದೆ. ರಾಜ್ಯಾದ್ಯಂತ 570 ಜನರನ್ನು ಬಂಧಿಸಲಾಗಿದೆ, 29,603.15 ಕ್ವಿಂಟಲ್ ಅಕ್ಕಿ ಹಾಗೂ 314 ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್. ಮುನಿಯಪ್ಪ ಅವರು ವಿಧಾನ ಪರಿಷತ್‌ನಲ್ಲಿ ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, "ಅನ್ನಭಾಗ್ಯ ಯೋಜನೆಯ ಅಕ್ಕಿ ಅಕ್ರಮ ಸಾಗಾಟ ಹಾಗೂ ಮಾರಾಟಕ್ಕೆ ಕಡಿವಾಣ ಹಾಕಲು ಆಹಾರ ಇಲಾಖೆಯು ತೀವ್ರ ಕ್ರಮ ಕೈಗೊಂಡಿದೆ. ಅಗತ್ಯ ವಸ್ತುಗಳ ಕಾಯ್ದೆ 1955ರಡಿ ಕ್ರಿಮಿನಲ್ ಪ್ರಕರಣಗಳು ದಾಖಲಿಸಲಾಗುತ್ತಿದೆ" ಎಂದು ಜಿಲ್ಲಾವಾರು ಕ್ರಮಗಳು

**ಯಾದಗಿರಿ:** ಅನ್ಯ ಇಲಾಖೆಯ ಅಧಿಕಾರಿಗಳನ್ನು ಆಹಾರ ಇಲಾಖೆ ಕರ್ತವ್ಯದಿಂದ ಬಿಡುಗಡೆ

**ಕೊಪ್ಪಳ:** ಗಂಗಾವತಿ ತಾಲೂಕಿನ ಕೆ.ಎಫ್.ಸಿ.ಎಸ್.ಸಿ ಗೋದಾಮು ಅಮಾನತ್ತು

ಪಡಿತರ ಚೀಟಿದಾರರು ಅಕ್ಕಿಯನ್ನು ದುರ್ಬಳಕೆ ಮಾಡಿಕೊಂಡು ಮಾರಾಟ ಮಾಡಿದರೆ ಚೀಟಿ ರದ್ದುಗೊಳಿಸಿ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸಚಿವರು ಎಚ್ಚರಿಕೆ ನೀಡಿದ್ದಾರೆ. ನ್ಯಾಯಬೆಲೆ ಅಂಗಡಿ, ತಾಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಜಾಗೃತಿ ಸಮಿತಿಗಳ ರಚನೆ

ಪ್ರತಿ ತಿಂಗಳು ಆಹಾರ ಅದಾಲತ್ ನಡೆಸಿ ಪಡಿತರ ಚೀಟಿದಾರರಿಗೆ ಜಾಗೃತಿ

ರಾಜ್ಯ ಮಟ್ಟದಲ್ಲಿ ಆಹಾರ ಜಾಗೃತ ದಳ ರಚಿಸಿ ಅಕ್ರಮಗಳ ಮೇಲೆ ಕಟ್ಟುನಿಟ್ಟಿನ ಕಣ್ಗಾವಲು

"ಅನ್ನಭಾಗ್ಯ ಯೋಜನೆಯ ಅಕ್ಕಿ ಬಡವರ ಹೊಟ್ಟೆಗೆ ಸೇರಬೇಕು ಎಂಬುದು ಸರ್ಕಾರದ ದೃಢ ನಿಲುವು. ಯಾರೇ ಅಕ್ರಮ ಮಾಡಿದರೂ ಕ್ಷಮೆಯಿಲ್ಲ" ಎಂದು ಸಚಿವ ಮುನಿಯಪ್ಪ ಘೋಷಿಸಿದ್ದಾರೆ.

ಅನ್ನಭಾಗ್ಯ ಯೋಜನೆಯಡಿ ಬಡ ಕುಟುಂಬಗಳಿಗೆ ಉಚಿತ ಅಕ್ಕಿ ನೀಡುವ ಸರ್ಕಾರದ ಈ ಯೋಜನೆಯನ್ನು ದುರ್ಬಳಕೆ ಮಾಡಿಕೊಂಡು ಲಾಭ ಪಡೆಯುತ್ತಿದ್ದ ಜಾಲಗಳ ಮೇಲೆ ಸರ್ಕಾರದ ಈ ದಾಳಿ ರಾಜ್ಯದ ಬಡವರಿಗೆ ನಿರಾಳತೆ ನೀಡಿದೆ.

## ವಂದೇ ಮಾತರಂ ಗೀತೆ ಬ್ರಿಟಿಷರ ಎದುರು ಬಂಡೆಯಂತೆ ನಿಂತಿತ್ತು: ಪ್ರಧಾನಿ ಮೋದಿ ಭಾವುಕ ಭಾಷಣ!



**ವಂದೇ ಮಾತರಂ ಗೀತೆಯು** ಬ್ರಿಟಿಷರ ಎದುರು ಬಂಡೆಯಂತೆ ನಿಂತಿತ್ತು. ಅದು ಸ್ವಾತಂತ್ರ್ಯ ಹೋರಾಟದ ಯುದ್ಧಘೋಷವಾಗಿತ್ತು, ಬಲಿದಾನದ ಮಂತ್ರವಾಗಿತ್ತು" ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಲೋಕಸಭೆಯಲ್ಲಿ ಭಾವುಕವಾಗಿ ನುಡಿದರು. ವಂದೇ ಮಾತರಂ ಗೀತೆಯ 150ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ ಸೋಮವಾರ ಲೋಕಸಭೆಯಲ್ಲಿ ಆರಂಭವಾದ ವಿಶೇಷ ಚರ್ಚೆಯನ್ನು ಪ್ರಧಾನಿ ಮೋದಿ ಉದ್ಘಾಟಿಸಿದರು.

"1857ರ ಮಹಾಸಂಗ್ರಾಮದ ನಂತರ ಬ್ರಿಟಿಷರು ಭಾರತೀಯರನ್ನು ದುರ್ಬಲಗೊಳಿಸಲು ಎಲ್ಲ ಪ್ರಯತ್ನ ಮಾಡಿದ್ದರು. ಭಾರತೀಯರ ಮೇಲೆ 'ಗಾಡ್ ಸೇವ್ ದಿ ಕ್ವೀನ್' ಹಾಡನ್ನು ಒತ್ತಾಯಪೂರ್ವಕವಾಗಿ ಹಾಡಿಸುತ್ತಿದ್ದರು. ಆ ಸಮಯದಲ್ಲಿ ಬಂಕಿಮ್ ಚಂದ್ರ ಚಟರ್ಜಿ ಅವರು ಇಟ್ಟಿಗೆಗೆ ಕಲ್ಲಿನಿಂದ ಉತ್ತರ ನೀಡಿದರು. ವಂದೇ ಮಾತರಂ ಜನಿಸಿತು" ಎಂದು ಪ್ರಧಾನಿ ವಿವರಿಸಿದರು.

ವಂದೇ ಮಾತರಂ ಗೀತೆಯ 50ನೇ ವಾರ್ಷಿಕೋತ್ಸವದ ಸಮಯದಲ್ಲಿ ದೇಶ ಗುಲಾಮಗಿರಿಯ ಸಂಕೋಲೆಯಲ್ಲಿತ್ತು. 100ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ ದೇಶ ತುರ್ತುಪರಿಸ್ಥಿತಿಯ ಸಂಕೋಲೆಯಲ್ಲಿತ್ತು. ಆದರೆ 150ನೇ ವಾರ್ಷಿಕೋತ್ಸವವನ್ನು ಸ್ವತಂತ್ರ, ಸಂವಿಧಾನ ಬದ್ಧ ಭಾರತದಲ್ಲಿ ಆಚರಿಸುತ್ತಿರುವುದು ನಮ್ಮೆಲ್ಲರ ಅದೃಷ್ಟ ಎಂದು ಪ್ರಧಾನಿ ಭಾವುಕರಾದರು.

ಬಾರಿಸಾಲ್ ಮೆರವಣಿಗೆಯಿಂದ ರಂಗಪುರದ ದಂಡದವರೆಗೆ

1906ರ ಮೇ 20ರಂದು ಬಾರಿಸಾಲ್‌ನಲ್ಲಿ (ಈಗ ಬಾಂಗ್ಲಾದೇಶ) 10,000ಕ್ಕೂ ಹೆಚ್ಚು ಜನರು ವಂದೇ ಮಾತರಂ ಧ್ವಜ ಹಿಡಿದು ಬೀದಿಗಿಳಿದರು

ಹಿಂದೂ -ಮುಸ್ಲಿಂ ಎಲ್ಲರೂ ಒಟ್ಟಾಗಿ ಮೆರವಣಿಗೆ ನಡೆಸಿದ್ದರು ರಂಗಪುರದ ಶಾಲೆಯಲ್ಲಿ ಮಕ್ಕಳು ವಂದೇ ಮಾತರಂ ಹಾಡಿದ್ದಕ್ಕೆ ಬ್ರಿಟಿಷರು 200 ವಿದ್ಯಾರ್ಥಿಗಳಿಗೆ ತಲಾ 5 ರೂ. ದಂಡ ವಿಧಿಸಿದ್ದರು ಅನೇಕ ಶಾಲೆಗಳಲ್ಲಿ ವಂದೇ ಮಾತರಂ ಹಾಡುವುದನ್ನೇ ನಿಷೇಧಿಸಿದ್ದರು

"ವಂದೇ ಮಾತರಂ ಕೇವಲ ರಾಜಕೀಯ ಸ್ವಾತಂತ್ರ್ಯದ ಮಂತ್ರವಲ್ಲ, ಅದು ಭಾರತಮಾತೆಯನ್ನು ವಸಾಹತುಶಾಹಿ ಕುರುಹುಗಳಿಂದ ಮುಕ್ತಗೊಳಿಸುವ ಪವಿತ್ರ ಯುದ್ಧಘೋಷವಾಗಿತ್ತು" ಎಂದು ಪ್ರಧಾನಿ ಗೌರವ ಸೂಚಿಸಿದರು.

ಜಗತ್ತಿನ ಇತಿಹಾಸದಲ್ಲಿ ವಂದೇ ಮಾತರಂ ಗೀತೆಯಷ್ಟು ಭಾವನಾತ್ಮಕ, ಪ್ರೇರಣಾದಾಯಿ ಹಾಡು ಬೇರೆ ಇಲ್ಲ ಎಂದು ಪ್ರಧಾನಿ ಹೇಳಿದರು. "ನಾವು ಇದನ್ನು ಬುದ್ಧಿವಂತಿಕೆಯಿಂದ ಬಳಸಿಕೊಂಡರೆ ಮುಂದಿನ ಪೀಳಿಗೆಗೆ ದೊಡ್ಡ ಸ್ಫೂರ್ತಿಯಾಗಲಿದೆ" ಎಂದು ಕರೆ ನೀಡಿದರು.

## ಐದು ಲಕ್ಷ ಹಿಂದೂಗಳಿಂದ ಭಗವದ್ಗೀತಾ ಪಠಣ

**ಕೋಲ್ಕತಾ:** ಪಶ್ಚಿಮ ಬಂಗಾಳವು ಇತ್ತೀಚೆಗೆ ವಿವಾದಾತ್ಮಕ ಘಟನೆಗಳಿಂದ ಸುದ್ದಿಯಲ್ಲಿದೆ. ಅದರಲ್ಲೂ ವಿಶೇಷವಾಗಿ, ಬಾಬ್ರಿ ಮಸೀದಿ ವಿಚಾರದಲ್ಲಿ ರಾಜ್ಯಾದ್ಯಂತ ರಾಜಕೀಯ ಬಿರುಗಾಳಿ ಎದ್ದಿದೆ. ಕಾಂಗ್ರೆಸ್‌ನಿಂದ ಅಮಾನತುಗೊಂಡ ಶಾಸಕ ರೊಬ್ಬರು ಮುರ್ಶಿದಾಬಾದ್‌ನಲ್ಲಿ ಬಾಬ್ರಿ ಮಸೀದಿಯ ಮಾದರಿಯಲ್ಲಿ ಅಡಿಗಲ್ಲು ಹಾಕಿ ತೀವ್ರ ವಿವಾದ ಸೃಷ್ಟಿಸಿದರು. ಅಯೋಧ್ಯೆ ಬಾಬ್ರಿ ಮಸೀದಿ ಧ್ವಂಸಗೊಂಡ ದಿನವನ್ನೇ ಅಡಿಗಲ್ಲು ಹಾಕಲು ಆಯ್ದುಕೊಂಡಿದ್ದು, ಇದು ರಾಷ್ಟ್ರಮಟ್ಟದಲ್ಲಿ ಚರ್ಚೆಗೆ ಗ್ರಾಸವಾಯಿತು.

ಈ ವಿವಾದಾತ್ಮಕ ಘಟನೆಯ ಮರುದಿನವೇ, ಕೋಲ್ಕತಾದ ಪ್ರತಿಷ್ಠಿತ ಬ್ರಿಗೇಡ್ ಪರೇಡ್ ಮೈದಾನದಲ್ಲಿ ಅಭೂತಪೂರ್ವ ಘಟನೆಯೊಂದು ನಡೆಯಿತು. ಇದು ಪಶ್ಚಿಮ ಬಂಗಾಳದ ರಾಜಕೀಯ ಮತ್ತು ಸಾಮಾಜಿಕ ವಲಯದಲ್ಲಿ ಹೊಸ ಸಂಚಲನ ಮೂಡಿಸಿದೆ. ರಾಜ್ಯದ ಇತಿಹಾಸದಲ್ಲೇ ದಾಖಲೆ ಎನ್ನುವಂತೆ, ಐದು ಲಕ್ಷಕ್ಕೂ ಹೆಚ್ಚು ಹಿಂದೂಗಳು ಒಂದೆಡೆ ಸೇರಿ 'ಭಗವದ್ಗೀತಾ ಪಠಣ' ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಈ ಐತಿಹಾಸಿಕ 'ಹಿಂದೂ ಸಂಗಮ'ವನ್ನು ಬಿಜೆಪಿ ಸೇರಿದಂತೆ ಹಲವು ಹಿಂದೂ ಪರ ಸಂಘಟನೆಗಳು ಕೊಂಡಾಡಿದ್ದು, 'ಬಂಗಾಳದ ಹಿಂದೂಗಳು ಎಚ್ಚೆತ್ತುಕೊಂಡಿದ್ದಾರೆ' ಎಂದು ಘೋಷಿಸಿವೆ.

ಈ ಬೃಹತ್ ಭಗವದ್ಗೀತೆ ಪಠಣ ಕಾರ್ಯಕ್ರಮವನ್ನು 'ಸನಾತನ ಸಂಸ್ಕೃತಿ ಸಾಂಸದ್' ಎಂಬ ಸಂಘಟನೆಯು ಯಶಸ್ವಿಯಾಗಿ ಆಯೋಜಿಸಿತ್ತು. ಪಶ್ಚಿಮ ಬಂಗಾಳದಲ್ಲಿರುವ ಹಿಂದೂ ಸಮುದಾಯಗಳಲ್ಲಿ ಒಗ್ಗಟ್ಟು ಮತ್ತು ಧಾರ್ಮಿಕ ಜಾಗೃತಿ ಮೂಡಿಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿತ್ತು. ಹಿಂದೂ ಧರ್ಮದ ಅತ್ಯಂತ ಪವಿತ್ರ ಗ್ರಂಥಗಳಲ್ಲಿ ಒಂದಾದ ಭಗವದ್ಗೀತೆಯು ಸಮಸ್ತ ಹಿಂದೂಗಳನ್ನು ಒಂದುಗೂಡಿಸುವ ಶಕ್ತಿಯನ್ನು ಹೊಂದಿದೆ. ಅದರ ಸಾಮೂಹಿಕ ಪಠಣವು ದೇಶಕ್ಕೆ ಮತ್ತು ಸಮಾಜಕ್ಕೆ ಒಳಿತನ್ನು ತರುತ್ತದೆ ಎಂಬ ನಂಬಿಕೆಯನ್ನು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಸಾಧು-ಸಂತರು ವ್ಯಕ್ತಪಡಿಸಿದರು. ಐದು ಲಕ್ಷಕ್ಕೂ ಅಧಿಕ ಜನರು ಏಕಕಾಲದಲ್ಲಿ ಭಗವದ್ಗೀತೆ ಪಠಿಸುತ್ತಿದ್ದ ದೃಶ್ಯ ಮನಸೆಳೆಯುವಂತಿತ್ತು. ಮೈದಾನದುದ್ದಕ್ಕೂ ಮೊಳಗಿದ ವಾದ್ಯಘೋಷಗಳು, ಮಂತ್ರಗಳ ಪಠಣ ಮತ್ತು ಭಕ್ತಿಪೂರ್ವಕ ವಾತಾವರಣವು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತ್ತು. ಈ ಯಶಸ್ವಿ ಸಮಾವೇಶದ ಕುರಿತು ಪಶ್ಚಿಮ ಬಂಗಾಳದ ಬಿಜೆಪಿ ನಾಯಕ ದಿಲೀಪ್ ಘೋಷ್ ಅವರು ಮಾತನಾಡುತ್ತಾ, ತಮ್ಮ ಸಂತಸವನ್ನು ವ್ಯಕ್ತಪಡಿಸಿದರು. ಕೋಲ್ಕತಾದಲ್ಲಿ ಅದ್ಭುತ ಕಾರ್ಯಕ್ರಮ ನಡೆದಿದೆ. ಇಷ್ಟು ದೊಡ್ಡ ಸಂಖ್ಯೆಯಲ್ಲಿ ಹಿಂದೂಗಳು ಪಾಲ್ಗೊಂಡಿರುವುದು, ಪಶ್ಚಿಮ ಬಂಗಾಳದ ಹಿಂದೂಗಳು ಎಚ್ಚೆತ್ತುಕೊಂಡಿದ್ದಾರೆ ಎಂಬುದಕ್ಕೆ ಸ್ಪಷ್ಟ ನಿದರ್ಶನ. ಹಿಂದೂಗಳು ಒಗ್ಗಾಟ್ಟಾಗುತ್ತಿದ್ದಾರೆ. ಈ ಒಗ್ಗಟ್ಟಿನ ಶಕ್ತಿ ರಾಜ್ಯದಲ್ಲಿ ಹೊಸ ರಾಜಕೀಯ ಬದಲಾವಣೆಗೆ ಕಾರಣವಾಗಲಿದೆ ಎಂದು ಹೇಳಿದರು.

ಕಳೆದ ವರ್ಷ ಸಿಲಿಗುರಿಯಲ್ಲಿ ಆಯೋಜಿಸಲಾಗಿದ್ದ ಇದೇ ರೀತಿಯ ಭಗವದ್ಗೀತೆ ಪಠಣ ಕಾರ್ಯಕ್ರಮದಲ್ಲಿ ಸುಮಾರು ಒಂದು ಲಕ್ಷ ಮಂದಿ ಪಾಲ್ಗೊಂಡಿದ್ದರು. ಆದರೆ, ಈ ವರ್ಷ ಕೋಲ್ಕತಾದಲ್ಲಿ ಪಾಲ್ಗೊಂಡವರ ಸಂಖ್ಯೆ ಬರೋಬ್ಬರಿ ಐದು ಲಕ್ಷಕ್ಕೆ ಏರಿಕೆಯಾಗಿರುವುದು, ರಾಜ್ಯದಲ್ಲಿ ಹಿಂದೂ ಜಾಗೃತಿಯ ಅಲೆ ಹೆಚ್ಚುತ್ತಿರುವುದನ್ನು ಸೂಚಿಸುತ್ತದೆ ಎಂದು ದಿಲೀಪ್ ಘೋಷ್ ವಿಶ್ಲೇಷಿಸಿದರು. ಈ ಮಹಾಸಂಗಮವನ್ನು ಅವರು 'ಬಂಗಾಳದಲ್ಲಿ ಹಿಂದೂಗಳ ಬಿರುಗಾಳಿ' ಎಂದು ಬಣ್ಣಿಸಿದರು.

ಕೋಲ್ಕತಾ ಮತ್ತು ಸಿಲಿಗುರಿಯಲ್ಲಿ ನಡೆದ ಭಗವದ್ಗೀತಾ ಪಠಣ ಕಾರ್ಯಕ್ರಮಗಳ ಯಶಸ್ಸಿನಿಂದ ಸ್ಫೂರ್ತಿ ಪಡೆದಿರುವ 'ಸನಾತನ ಸಂಸ್ಕೃತಿ ಸಾಂಸದ್' ಸಂಘಟನೆಯು ಇದೇ ರೀತಿಯ ಕಾರ್ಯಕ್ರಮಗಳನ್ನು ದೇಶದ ಇತರ ಪ್ರಮುಖ ನಗರಗಳಲ್ಲಿ ಆಯೋಜಿಸಲು ಯೋಜನೆ ರೂಪಿಸುತ್ತಿದೆ. ವಿವಿಧ ಸಾಧು-ಸಂತರು ಮತ್ತು ಹಿಂದೂ ಸಂಘಟನೆಗಳ ಸಹಕಾರದೊಂದಿಗೆ ಈ ಪಠಣ ಕಾರ್ಯಕ್ರಮಗಳನ್ನು ದೊಡ್ಡ ಮಟ್ಟದಲ್ಲಿ ನಡೆಸಲು ಸಂಘಟನೆ ಮುಂದಾಗಿದೆ.

ಈ ಮೂಲಕ ದೇಶಾದ್ಯಂತ ಸನಾತನ ಧರ್ಮದ ಸಂದೇಶವನ್ನು ಮತ್ತು ಹಿಂದೂಗಳಲ್ಲಿ ಒಗ್ಗಟ್ಟಿನ ಭಾವನೆಯನ್ನು ಮತ್ತಷ್ಟು ಬಲಪಡಿಸುವ ಗುರಿಯನ್ನು ಹೊಂದಿದೆ.

## ನನ್ನ ಕೊಡುಗೆ ಬಗ್ಗೆ ಹೇಳ್ತೀನಿ, ನಿಮ್ಮ ಕೊಡುಗೆ ಪಟ್ಟಿ ಕೊಡಿ – ಸಿಎಂಗೆ ಹೆಚ್‌ಡಿಕೆ ಸವಾಲ್



**ನವದೆಹಲಿ:** ಮಂಡ್ಯಕ್ಕೆ ನಾನು ಕೊಟ್ಟಿದ್ದನ್ನು ಪಟ್ಟಿ ಮಾಡಿ ಹೇಳುತ್ತೇನೆ, ಮೊದಲು ಐದು ವರ್ಷ ಮುಖ್ಯಮಂತ್ರಿ ಆಗಿದ್ದಾಗ ಹಾಗೂ ಈಗ ಏನೇನು ಕೊಟ್ಟಿದ್ದೀರಿ ಎಂಬುದನ್ನು ನೀವು ಹೇಳಿ ಎಂದು ಸಿದ್ದರಾಮಯ್ಯಗೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಸವಾಲು ಹಾಕಿದ್ದಾರೆ. ನವದೆಹಲಿಯ ತಮ್ಮ ಗೃಹ ಕಚೇರಿಯಲ್ಲಿಂದು ನಡೆದ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು, ಮಂಡ್ಯಕ್ಕೆ ನಾನು ಕೊಟ್ಟಿದ್ದನ್ನು ಹೇಳುತ್ತೇನೆ.

ಸಿದ್ದರಾಮಯ್ಯನವರೇ ನೀವು ರೈತರಿಗೆ ಏನು ಕೊಡುಗೆ ಕೊಟ್ಟಿದ್ದೀರಿ ಎಂಬುದನ್ನು ಹೇಳಿ. ಮಂಡ್ಯಕ್ಕೆ ನಿಮ್ಮ ಕೊಡುಗೆ ಏನು? ಹಿಂದಿನ ಐದು ವರ್ಷದ ಆಡಳಿತದಲ್ಲಿ 200ಕ್ಕೂ ಹೆಚ್ಚು ರೈತರು ಮಂಡ್ಯದಲ್ಲಿ ಸರಣಿ ಆತ್ಮಹತ್ಯೆ ಮಾಡಿಕೊಂಡಿದ್ದೇ ನಿಮ್ಮ ಕೊಡುಗೆ. ಅಂತಹ ಕಷ್ಟಕಾಲದಲ್ಲಿ ನಾನು ಅಧಿಕಾರಕ್ಕೆ ಬಂದ ಮೇಲೆ ಅದೇ ಜಿಲ್ಲೆಯ ರೈತರ 900 ಕೋಟಿ ರೂ. ಸಾಲ ಮನ್ನಾ ಮಾಡಿದೆ. ಇದಕ್ಕಿಂತ ಕೊಡುಗೆ ಬೇಕಾ? ನಿಮ್ಮ ಕಾಲದಲ್ಲಿ ರೈತರ ಜೀವ ಹೋಯಿತು, ನನ್ನ ಕಾಲದಲ್ಲಿ ಜೀವ ಉಳಿಯಿತು. ಇದು ನಿಮಗೆ ಗೊತ್ತಿರಲಿ ಎಂದು ವಾಗ್ದಾಳಿ ನಡೆಸಿದ್ದಾರೆ. ರಾಜ್ಯದಲ್ಲಿ ರೈತರ ಪರಿಸ್ಥಿತಿ ಎಲ್ಲಿಗೆ ಬಂದಿದೆ ಎಂಬುದನ್ನು ನೋಡಿ. ಪ್ರವಾಹ, ಮಳೆಯಿಂದಾಗಿ ಜನ ಕಣ್ಣೀರಲ್ಲಿ ಕೈ ತೊಳೆಯುತ್ತಿದ್ದರೆ, ನೀವು ಮೋಜು ಮಸ್ತಿ ಮಾಡುತ್ತಿದ್ದೀರಿ. ಕಲ್ಯಾಣ ಕರ್ನಾಟಕದಲ್ಲಿ ತೊಗರಿ ಬೆಳೆಗಾರರ ಪರಿಸ್ಥಿತಿ ಏನಾಗಿದೆ? ತೊಗರಿ ದರ ಕುಸಿದಿದೆ. ಅದಕ್ಕೆ ಏನು ಮಾಡಿದ್ದೀರಿ? ಈವರೆಗೆ ತೊಗರಿ ಖರೀದಿ ಕೇಂದ್ರಗಳನ್ನು ತೆರೆದಿಲ್ಲ. ಸರಿಯಾದ ಸಮಯದಲ್ಲಿ ರಾಜ್ಯ ಸರ್ಕಾರ ಮಧ್ಯಪ್ರವೇಶ ಮಾಡಿ ರೈತರ ನೆರವಿಗೆ ಬರಬೇಕಿತ್ತು, ಬಂದಿಲ್ಲ ಯಾಕೆ? ಕೇಂದ್ರ ಸರ್ಕಾರ ರಾಜ್ಯಕ್ಕೆ ಪರಿಶೀಲನಾ ತಂಡ ಕಳುಹಿಸಿ ಎನ್ನುತ್ತಾರೆ. ನಾಲ್ಕು ತಿಂಗಳ ಬಳಿಕ ಇವರಿಗೆ ಜ್ಞಾನೋದಯ ಆಗಿದೆ. ಈಗ ಕೇಂದ್ರ ತಂಡ ರಾಜ್ಯಕ್ಕೆ ಬಂದರೆ ಏನು ವರದಿ ಕೊಡುತ್ತಾರೆ? ಎಂದು ಖಾರವಾಗಿ ಪ್ರಶ್ನಿಸಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ `ನೀರಿನ ಹೆಜ್ಜೆ' ಪುಸ್ತಕದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಯಾರೋ ಬರೆದಿರುವ ಆ ಪುಸ್ತಕ ಕೇವಲ ಕಟ್ ಅಂಡ್ ಪೇಸ್ಟ್ ಅಷ್ಟೇ. ಬೇರೆ ಯಾವುದೋ ಪುಸ್ತಕದಲ್ಲಿ ಬರೆದಿರುವುದನ್ನೇ ಕತ್ತರಿಸಿ ಈ ಪುಸ್ತಕದಲ್ಲಿ ಅಂಟಿಸಿದ್ದಾರೆ. ನನಗೆ ಈ ಪುಸ್ತಕವನ್ನು ಯಾರೋ ತಂದುಕೊಟ್ಟರು. ಸಾಮಾನ್ಯವಾಗಿ ಯಾವುದೇ ಪುಸ್ತಕವಾದರೂ ಅದನ್ನು ಆಸಕ್ತಿಯಿಂದ ಓದುತ್ತೇನೆ. ಆದರೆ, ಈ ಪುಸ್ತಕ ನೋಡಿದಾಗ ಇಲ್ಲಿರುವುದು ಅವರ ಹೆಜ್ಜೆಗಳಲ್ಲ, ಯಾರದೋ ಹೆಜ್ಜೆಗಳನ್ನು ನನ್ನ ಹೆಜ್ಜೆಗಳು ಎಂದು ತೋರಿಸುವ ಕಸರತ್ತು ಮಾಡಿದ್ದಾರೆ ಎಂದು ಹೇಳಿದ್ದಾರೆ. ಮೇಕೆದಾಟು: ತಮಿಳುನಾಡು ಜೊತೆ ಮಾತಾಡಲಿ: ಮೇಕೆದಾಟು ಯೋಜನೆ ಬಗ್ಗೆ ಜನರನ್ನು ಯಾಮಾರಿಸುವುದಕ್ಕೆ ನಮ್ಮ ನೀರು-ನಮ್ಮ ಹಕ್ಕು ಎಂದು ಪಾದಯಾತ್ರೆ ಮಾಡಿದರು. ಆ ಹೆಸರಿನಲ್ಲಿ ಅವರು ಅಧಿಕಾರಕ್ಕೆ ಬಂದರು. ಮೇಕೆದಾಟು ಮಾತ್ರ ಇದ್ದಲ್ಲಿಯೇ ಇದೆ. ತಮಿಳುನಾಡಿನಲ್ಲಿ ಅಧಿಕಾರ ನಡೆಸುತ್ತಿರುವವರು, ಇವರು ರಾಜಕೀಯ ಪಾರ್ಟನರ್‌ಗಳೇ ಆಗಿದ್ದಾರೆ. ಇವರು ಹೋಗಿ ಕುಳಿತು ಮಾತನಾಡಬೇಲ್ಲವೇ? ಎಂದಿದ್ದಾರೆ.

ಮೇಕೆದಾಟು ಪ್ರದೇಶದಲ್ಲಿ ಸುಮಾರು 12 ಸಾವಿರ ಎಕರೆಯಷ್ಟು ಅರಣ್ಯ ಮುಳಗಡೆ ಆಗುತ್ತದೆ. ವನ್ಯ ಸಂಪತ್ತು ನಾಶವಾಗುತ್ತದೆ ಎಂದು ಹೇಳುತ್ತಿದ್ದಾರೆ. ಬರೀ ಕೇಂದ್ರ ಸರ್ಕಾರದ ಅಧಿಕಾರ ಮಾತ್ರವಲ್ಲ, ರಾಜ್ಯ ಸರ್ಕಾರಕ್ಕೂ ಹಕ್ಕು, ಜವಾಬ್ದಾರಿ ಇರುತ್ತದೆ. ಪಲಾಯನ ಮಾಡುವ ಅಗತ್ಯವಿಲ್ಲ, ಇನ್ನೆಷ್ಟು ದಿನ ನುಣುಚಿಕೊಳ್ಳುತ್ತೀರಿ? ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷಗಳು ಮೀರಿದೆ. ಅದರಲ್ಲಿ 50 ವರ್ಷಕಾಲ ಕೇಂದ್ರ ಮತ್ತು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವೇ ಆಡಳಿತ ನಡೆಸಿದೆ. ಆಗ ಮೇಕೆದಾಟು ಬಗ್ಗೆ ಏನು ಮಾಡಿದಿರಿ ಎಂದು ಜನರಿಗೆ ಹೇಳಬೇಕಲ್ಲವೇ? ಎಂದು ಪ್ರಶ್ನಿಸಿದ್ದಾರೆ.

ಮಾತೆತ್ತಿದರೆ ರಾಜ್ಯಕ್ಕೆ ಕೇಂದ್ರ ಸರ್ಕಾರ ಸಹಕಾರ ನೀಡುತ್ತಿಲ್ಲ ಎಂದು ಸಬೂಬು ಹೇಳುತ್ತಿದ್ದಾರೆ. ಹಾಗಾದರೆ ರಾಜ್ಯ ಸರ್ಕಾರ ಮಾಡುತ್ತಿರುವುದೇನು? ನಾನು ಕೇಂದ್ರ ಸಚಿವನಾದ ಕೂಡಲೇ ರಾಜ್ಯಕ್ಕೆ ಒಳ್ಳೆಯದಾಗಲಿ ಎಂದು ಕುದುರೆಮುಖ ಉಕ್ಕು ಮತ್ತು ಕಬ್ಬಿಣ ಕಾರ್ಖಾನೆಯ ದೇವದಾರಿ ಗಣಿ ಯೋಜನೆಗೆ ಹಣಕಾಸು ಖಾತರಿ ನೀಡುವ ಕಡತಕ್ಕೆ ಸಹಿ ಹಾಕಿದೆ.

ಮರುದಿನದಿಂದಲೇ ಅದಕ್ಕೆ ಅಡ್ಡಿ ಉಂಟು ಮಾಡುವ ಕೆಲಸಕ್ಕೆ ರಾಜ್ಯ ಸರ್ಕಾರ ಮುಂದಾಯಿತು. ಈಗ ಅವರ ಪಕ್ಷದ ಜನಪ್ರತಿನಿಧಿ ಒಬ್ಬರು ಬಳ್ಳಾರಿಯಲ್ಲಿ ದಿನನಿತ್ಯ ಪ್ರತಿಭಟನೆ ಮಾಡಿಸುವ, ಜನರನ್ನು ಎತ್ತಿ ಕಟ್ಟುವ ಕೆಲಸ ಮಾಡುತ್ತಿದ್ದಾರೆ. ತಮಗೆ ವೈಯಕ್ತಿಕವಾಗಿ ರಾಷ್ಟ್ರೀಯ ಖನಿಜಾಭಿವೃದ್ಧಿ ನಿಗಮದಿಂದ ಲಾಭವಾಗುವ ಕೆಲಸ ಆಗಲಿಲ್ಲ ಎಂದು ಯೋಜನೆಗೆ ಅಡ್ಡಿಪಡಿಸುತ್ತಿದ್ದಾರೆ. ಹೀಗಾದರೆ ರಾಜ್ಯದ ಅಭಿವೃದ್ಧಿ ಸಾಧ್ಯವೇ? ಸಹಕಾರ ಪಡೆಯುವುದು, ಕೊಡುವುದು ಎಂದರೆ ಹೀಗೇನಾ? ಎಂದು ಕಿಡಿಕಾರಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.